MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 314 | ಗುರುವಾರ : 02-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 314 | THURSDAY : 02-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕಲ್ಮಠ ಸರ್ವಧರ್ಮ ಸಮ್ಮೇಳನಕ್ಕೆ ಬಿ.ವೈ.ವಿಜಯೇಂದ್ರ ಚಾಲನೆ

# ರೈತರ ನೆರವಿಗೆ ಸರ್ಕಾರ ಧಾವಿಸಲಿ: ವಿಜಯೇಂದ್ರ




ಯುವ ಮಾರ್ಗ ಸುದ್ದಿ

**ಮಾನ್ವಿ,ಅ.1**–ಪಟ್ಟಣದ ಧ್ಯಾನ ಮಂದಿರದ ಆವರಣದಲ್ಲಿ ನಡೆದ ಶ್ರೀ ಕಲ್ಮಠ ದಸರಾ ಸುವರ್ಣ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಸರ್ವಧರ್ಮ ಸಮ್ಮೇಳನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಚಾಲನೆ ನೀಡಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಬಿ.ವೈ.ವಿಜಯೇಂದ್ರ, "ಬೀದರ್, ಕಲಬುರ್ಗಿ, ಜೇವರ್ಗಿ, ಶಹಾಪುರ ಜಿಲ್ಲೆಗಳಲ್ಲಿ ಸಂಚಾರ ಮಾಡಿ ಅತಿವೃಷ್ಟಿಯಿಂದ ರೈತರ ಬೆಳೆ ಹಾನಿಯಾಗಿರುವುದನ್ನು ಪರಿಶೀಲಿಸಿದ್ದೇನೆ. ಇಂದು ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದು, ಕೂಡಲೇ ಸರ್ಕಾರವು ರೈತರ ನೆರವಿಗೆ ಬರಬೇಕು" ಎಂದು ಆಗ್ರಹಿಸಿದರು.

"ನಮ್ಮ ರಾಜ್ಯದಲ್ಲಿ ವೀರಶೈವ–ಲಿಂಗಾಯತ ಮಠಗಳ ಕೊಡುಗೆ ಅಪಾರವಾಗಿದೆ. ಅನ್ನದಾಸೋಹ, ಅಕ್ಷರದಾಸೋಹ, ಜ್ಞಾನ ದಾಸೋಹ ಸೇರಿದಂತೆ ತ್ರಿವಿಧ ದಾಸೋಹಗಳನ್ನು ನಾಡಿನ ಎಲ್ಲ ಜಾತಿ–ಸಮುದಾಯಗಳಿಗೆ ಭೇದವಿಲ್ಲದೆ ನೀಡುತ್ತ ಬಂದಿವೆ. ಸಮಾಜದ ಎಲ್ಲ ಜಾತಿ, ಧರ್ಮದವರಿಗೆ ನ್ಯಾಯವನ್ನು ಕೊಡುವ, ಆಶ್ರಯವನ್ನು ನೀಡುವ ಶಕ್ತಿ ಈ ಸಮಾಜಕ್ಕಿದೆ. ಇಂದು ಬಸವಣ್ಣನವರ ಆಶಯಗಳನ್ನು ಸಿದ್ಧೇಶ್ವರ ಅಪ್ಪಗಳು ಹಾಗೂ ಸಿದ್ಧಗಂಗಾ ಗುರುಗಳು ಮುಂದುವರೆಸಿಕೊಂಡು ಬಂದಿದ್ದಾರೆ" ಎಂದರು.

ಕಲ್ಮಠಕ್ಕೆ 600 ವರ್ಷಗಳ ಭವ್ಯ ಇತಿಹಾಸವಿದೆ ಎಂದು ನೆನಪಿಸಿದ ವಿಜಯೇಂದ್ರ, ಇಂದಿನ ಶ್ರೀಗಳು ಸಮಾಜ ಕಲ್ಯಾಣ, ಶಿಕ್ಷಣ ಸಂಸ್ಥೆಗಳ ಸ್ಥಾಪನೆ ಮತ್ತು ಎಲ್ಲ ಸಮುದಾಯಗಳ ನಡುವೆ ಭಾವೈಕ್ಯತೆ ಮೂಡಿಸಲು ಶ್ರಮಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

"ನಮ್ಮ ನಾಡಿನ ವಿಶೇಷತೆಯೆಂದರೆ ಎಲ್ಲ ಸಮುದಾಯಗಳನ್ನು ಒಟ್ಟಾಗಿ ಕರೆದುಕೊಂಡು ಹೋಗುವುದು. ಆದರೆ ಇಂದು ಕೆಲವು ಸ್ವಾರ್ಥ ಸಾಧಕರು ಕನ್ನಡನಾಡಿನಲ್ಲಿ ಸಮಾಜ, ಸಮಾಜಗಳನ್ನು, ಧರ್ಮ, ಧರ್ಮಗಳನ್ನು ಒಡೆಯುವ ಕಾರ್ಯವನ್ನು ಮಾಡುತ್ತಿದ್ದಾರೆ" ಎಂದು ವಿಷಾದ ವ್ಯಕ್ತಪಡಿಸಿದರು.

ಶಿಕ್ಷಣದ ಜೊತೆಗೆ ಸಂಸ್ಕಾರದ ಮಹತ್ವವನ್ನು ಒತ್ತಿ ಹೇಳಿದ ಅವರು, "ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ಗುರುವಿನ ಆಶೀರ್ವಾದವನ್ನು ನೀಡಿದಾಗ ಮಾತ್ರ ನಾಳಿನ ಉತ್ತಮ ಪ್ರಜೆಗಳಾಗಲು ಸಾಧ್ಯವಾಗುತ್ತದೆ" ಎಂದು ನುಡಿದರು.(2ನೇಪುಟಕ್ಕೆ)



# ಸಿಎಂ ವೈಮಾನಿಕ ಸಮೀಕ್ಷೆ



**ಕಲಬುರಗಿ, ಅ.1**– ಕಲ್ಯಾಣ ಕರ್ನಾಟಕದ ನೆರೆ ಪೀಡಿತ ಜಿಲ್ಲೆಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವೈಮಾನಿಕ ಸಮೀಕ್ಷೆ ನಡೆಸಿ ಪ್ರವಾಹದಿಂದ ಆಗಿರುವ ಹಾನಿಯನ್ನು ವೀಕ್ಷಿಸಿದರು.

ಬೆಂಗಳೂರಿನಿಂದ ಬೆಳಿಗ್ಗೆ ಕಲಬುರುಗಿ ವಿಶೇಷ ವಿಮಾನದಲ್ಲಿ ಆಗಮಿಸಿದ ಮುಖ್ಯಮಂತ್ರಿಗಳು ಇಲ್ಲಿನ ವಿಮಾನ ನಿಲ್ದಾಣದಿಂದಲ್ಲೇ ಹೆಲಿಕಾಪ್ಟರ್ ಏರಿ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಿದರು.

ಸುಮಾರು 2 ಗಂಟೆಗೂ ಹೆಚ್ಚು ಕಾಲ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರುಗಳಾದ ಈಶ್ವರ್ ಖಂಡ್ರೆ, ಪ್ರಿಯಾಂಕಾ ಖರ್ಗೆ, ಕೃಷ್ಣ ಬೈರೇಗೌಡ, ಡಾ. ಶರಣ ಪ್ರಕಾಶ್ ಪಾಟೀಲ್ ಇವರುಗಳ ಜೊತೆ ಕಲಬುರಗಿ, ಬೀದರ್, ಯಾದಗಿರ್ ಹಾಗೂ ಬೀದರ್ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳನ್ನು ವೀಕ್ಷಿಸಿದರು.(2ನೇಪುಟಕ್ಕೆ)

# ಮಲ್ಲಿಕಾರ್ಜುನ ಖರ್ಗೆ ಅವರ ಆರೋಗ್ಯ ವಿಚಾರಿಸಿದ ಸಿಎಂ



**ಬೆಂಗಳೂರು, ಅ.1**– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಆಸ್ಪತ್ರೆಯಲ್ಲಿ ಭೇಟಿ ಮಾಡಿ, ಆರೋಗ್ಯ ವಿಚಾರಿಸಿ, ಶೀಘ್ರ ಗುಣಮುಖರಾಗುವಂತೆ ಹಾರೈಸಿದ್ದಾರೆ.ಮಲ್ಲಿಕಾರ್ಜುನ ಖರ್ಗೆ ಅವರು ನಿಯಮಿತ ಆರೋಗ್ಯ ತಪಾಸಣೆಗಾಗಿ ಮಂಗಳವಾರ ಎಂಎಸ್ ರಾಮಯ್ಯ ಆಸ್ಪತ್ರೆಗೆ ಭೇಟಿ ನೀಡಿದ್ದರು. ಉಸಿರಾಟದ ಸಮಸ್ಯೆಯಿಂದ ಅಸ್ವಸ್ಥತೆ ಕಾಡಿದ್ದರಿಂದ ಆಸ್ಪತ್ರೆಗೆ ದಾಖಲಾಗಿದ್ದರು. ನುರಿತ ವೈದ್ಯರ ತಂಡ, ಖರ್ಗೆ ಅವರಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡುತ್ತಿದೆ.

ಬೆಳಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಸೇರಿದಂತೆ ಹಲವಾರು ಮಂದಿ ಆಸ್ಪತ್ರೆಗೆ ತೆರಳಿ ಖರ್ಗೆ ಅವರ ಆರೋಗ್ಯ ವಿಚಾರಿಸಿದರು. ವಿಧಾನ ಪರಿಷತ್ ಸದಸ್ಯ ಎಂ.ಆರ್. ಸೀತಾರಾಮ್,ಮಾಜಿ ಸದಸ್ಯ ಯು.ಬಿ. ವೆಂಕಟೇಶ್ ಮತ್ತಿತರರು ಜೊತೆಯಲ್ಲಿದ್ದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಯವರು ಮಲ್ಲಿಕಾರ್ಜುನ ಖರ್ಗೆ ಅವರ ಆರೋಗ್ಯ ಉತ್ತಮವಾಗಿದೆ. ಎಲ್ಲರ ಜೊತೆ ಆರಾಮವಾಗಿ ಮಾತನಾಡಿಕೊಂಡಿದ್ದಾರೆ. ನಿಯಮಿತ ತಪಾಸಣೆಗೆ ಬಂದಿದ್ದ ಅವರು ಚಿಕಿತ್ಸೆಗೆ ದಾಖಲಾಗಿದ್ದರು. ನಾಳೆ ಆಸ್ಪತ್ರೆಯಿಂದ ಮನೆಗೆ ತೆರಳಲಿದ್ದಾರೆ ಎಂದು ಅವರು ಹೇಳಿದರು.

# ನಾಡಿನಲ್ಲಿ ಅಧರ್ಮ ಅಳಿಯಲಿ,ಮಾನವ ಧರ್ಮ ಉಳಿಯಲಿ :ರವಿ ಬೋಸರಾಜು

ಯುವ ಮಾರ್ಗ ಸುದ್ದಿ



**ರಾಯಚೂರು,ಅ.1**–ನಾಡಿನ ಬಹುದೊಡ್ಡ ಹಬ್ಬವಾದ ನವರಾತ್ರಿ ದಸರಾ ಹಬ್ಬ ನಮ್ಮೆಲ್ಲರ ಸೌಹಾರ್ಧತೆಯ ಸಂಕೇತವಾಗಿದೆ. ಕೆಡಕಿನ ಮೇಲೆ ವಿಜಯ ಸಾಧಿಸುವ ಈ ವಿಜಯ ದಶಮಿ ದಸರಾ ಹಬ್ಬದಂದು ನಾಡ ದೇವತೆಯಾದ ಶ್ರೀ ತಾಯಿ ಚಾಮುಂಡೇಶ್ವರಿ ನಾಡಿನ ಸಮಸ್ತ ಜನತೆಗೆ ಒಳಿತು ಮಾಡಲಿ ಎಂದು ಕಾಂಗ್ರೆಸ್ ರಾಜ್ಯ ಯುವ ಮುಖಂಡರಾದ ರವಿ ಬೋಸರಾಜು ಅವರು ಶ್ರೀದೇವಿಯಲ್ಲಿ ಪ್ರಾರ್ಥಿಸಿದರು. ರಾಯಚೂರಿನ ಗೋಲ್ ಬಜಾರ್, ಗಣೇಶ ಕಟ್ಟೆಯ ದೇವಸ್ಥಾನ, ತುಳಜಾಭವಾನಿ, ದೇವಸ್ಥಾನ, ಹರಿಜನವಾಡದ ಸವಾರಮ್ಮ ದೇವಸ್ಥಾನ, ಸಿಯಾತಲಾಬ್ ಸೇರಿದಂತೆ ವಿವಿಧ ಬಡಾವಣೆಯಲ್ಲಿ ವಿಜೃಂಭಣೆಯಿಂದ ಆಯೋಜಿಸಿದ್ದ ದಸರಾ ಹಬ್ಬದ ಸಂಭ್ರಮದಲ್ಲಿ ಭಾಗವಹಿಸಿ ಮಹಾ ಮಂಗಳಾರುತಿ ಮೂಲಕ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು.

ನವರಾತ್ರಿ ದಸರಾ ಹಬ್ಬವು ನಾಡು–ನುಡಿ ಸಂಸ್ಕೃತಿ, ಸೌಹಾರ್ಧತೆ, ಮತ್ತು ಧಾರ್ಮಿಕ ಆಚರಣೆಗಳ ಸಂಗಮವಾಗಿದೆ. ನಾಡ ದೇವತೆ ಶ್ರೀ ತಾಯಿಯ ಆಶೀರ್ವಾದ ನಮ್ಮೆಲ್ಲರ ಮೇಲಿರಲಿ. ನಮ್ಮಲ್ಲಿರುವ ಕೆಡಕು ವಿಚಾರಗಳು ತೊಲಗಿಸಿ ಶಕ್ತಿ ನೀಡಿ ನಮ್ಮಲ್ಲಿರುವ ಕನಸುಗಳನ್ನು ವಿಜಯವಾಗಿಸಲು ಕರುಣಿಸಲಿ. ಎಲ್ಲರಿಗೂ ಸುಖ, ಶಾಂತಿ, ಸಮೃದ್ಧಿಯೊಂದಿಗೆ ಆರೋಗ್ಯವಂತರಾಗಿಸಲಿ. ಸಮಾಜದಲ್ಲಿನ ಅಧರ್ಮ ಅಳಿಯಲ್ಲಿ ಮಾನವ ಧರ್ಮ ಉಳಿಯಲಿ ಎಂದು ವಿಶೇಷ ಪೂಜೆ ಸಲ್ಲಿಸಿದರು.ವಿವಿಧ ದೇವಸ್ಥಾನಗಳಲ್ಲಿ ಆಯೋಜಿಸಿದ್ದ ಅನ್ನದಾಸೋಹ ಕಾರ್ಯಕ್ರಮದಲ್ಲಿ ಭಕ್ತಾದಿಗಳಿಗೆ ಅನ್ನ ಬಡಿಸುವ ಮೂಲಕ ದಾಸೋಹಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮೊಹಮ್ಮದ್ ಶಾಲ, ಹಿರಿಯರಾದ ರುದ್ರಪ್ಪ ಅಂಗಡಿ ,ಮಹಾನಗರ ಪಾಲಿಕೆ ಉಪ ಮಾಹಾ ಪೌರರಾದ ಸಾಜಿದ್ ಸಮೀರ್, ಪಾಲಿಕೆ ಸದಸ್ಯರಾದ ಬಿ ರಮೇಶ್, ಪಂಪಾಪತಿ, ರಾಜು ಪಟ್ಟಿ, ಗೋಪಿ, ಯುಸೂಫ್, ಈರಣ್ಣ ಭಂಡಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ 15.50 ರೂ. ಹೆಚ್ಚಳ



**ನವದೆಹಲಿ,ಅ.1**– ತೈಲ ಮಾರುಕಟ್ಟೆ ಕಂಪನಿಗಳು ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯಲ್ಲಿ ಹೊಸ ಪರಿಷ್ಕರಣೆ ಘೋಷಿಸಿದ್ದು, ಇದು ಇಂದಿನಿಂದಲೇ ಜಾರಿಗೆ ಬಂದಿದೆ. ಹಬ್ಬದ ಋತುವಿಗೆ ಸ್ವಲ್ಪ ಮುಂಚಿತವಾಗಿ ಈ ಹೆಚ್ಚಳವಾಗಿದ್ದು, ವಾಣಿಜ್ಯ ಅಡುಗೆ ಅನಿಲವನ್ನು ಹೆಚ್ಚು ಅವಲಂಬಿಸಿರುವ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ಹಲವಾರು ವ್ಯವಹಾರಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.

ಪರಿಷ್ಕೃತ ದರಗಳ ಪ್ರಕಾರ, 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು 15.50 ರೂ. ಹೆಚ್ಚಿಸಲಾಗಿದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್‌ನ ಹೊಸ ಚಿಲ್ಲರೆ ಬೆಲೆ ಈಗ 1,595.50 ರೂ. ಆಗಿದೆ. ಇತರ ಮಹಾನಗರಗಳಲ್ಲಿಯೂ ಇದೇ ರೀತಿಯ ಹೊಂದಾಣಿಕೆಗಳನ್ನು ಮಾಡಲಾಗಿದೆ. ಆದರೂ ಸ್ಥಳೀಯ ತೆರಿಗೆಗಳು ಮತ್ತು ಸಾರಿಗೆ ಶುಲ್ಕಗಳನ್ನು ಅವಲಂಬಿಸಿ ನಿಖರವಾದ ಬೆಲೆ ಬದಲಾಗುವ ಸಂಭವವಿದೆ. ಮುಖ್ಯವಾಗಿ, 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ ದರಗಳಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ವಾಣಿಜ್ಯ ದರಗಳಲ್ಲಿ ಏರಿಕೆಯ ಹೊರತಾಗಿಯೂ ಗೃಹಬಳಕೆಯ ಅಡುಗೆ ಅನಿಲ ಬೆಲೆಗಳು ಸ್ಥಿರವಾಗಿದೆ.

ಈ ಪರಿಷ್ಕರಣೆಯು ಮಳಿಗೆಗಳು, ಹೋಟೆಲ್‌ಗಳು ಮತ್ತು ಅಡುಗೆ ಸೇವೆಗಳಂತಹ ವಾಣಿಜ್ಯ ಸಂಸ್ಥೆಗಳ ಮೇಲೆ ನೇರ ಪರಿಣಾಮ ಬೀರುವ ನಿರೀಕ್ಷೆಯಿದೆ, ಇವೆಲ್ಲವೂ ದೈನಂದಿನ ಕಾರ್ಯಾಚರಣೆಗ ಳಿಗೆ ಎಲ್‌ಪಿಜಿಯನ್ನು ಅವಲಂಬಿಸಿವೆ. ಪ್ರತಿ ಸಿಲಿಂಡರ್ ಬೆಲೆ ಏರಿಕೆಯೊಂದಿಗೆ, ಈ ವ್ಯವಹಾರಗಳ ಕಾರ್ಯಾಚರಣೆಯ ವೆಚ್ಚಗಳು ಹೆಚ್ಚಾಗುವ (2ನೇ ಪುಟಕ್ಕೆ)

# ಬೆಂಗಳೂರಲ್ಲಿ ಆಯುಧ ಪೂಜೆ ಸಡಗರ, ದೇವಾಲಯಗಳಲ್ಲಿ ವಿಶೇಷ ಪೂಜೆ



**ಬೆಂಗಳೂರು,ಅ.1**– ರಾಜ್ಯಾದಂತ ಇಂದು ಆಯುಧ ಪೂಜೆ ಸಂಭ್ರಮ ಮನೆ ಮಾಡಿದ್ದು, ನಗರದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಕಾರ್ಯಗಳು ಶ್ರದ್ಧಾ ಭಕ್ತಿಯಿಂದ ನೆರವೇರಿದವು. ನಿನ್ನೆಯಿಂದಲೇ ಸರ್ಕಾರಿ ಕಚೇರಿಗಳು, ಕೈಗಾರಿಕೆಗಳು, ಖಾಸಗಿ ಕಚೇರಿಗಳಲ್ಲಿ ಆಯುಧ ಪೂಜೆ ನೆರವೇರಿದ್ದು, ಇಂದು ಸಹ ಹಲವೆಡೆ ಪೂಜೆಗಳು ನಡೆದವು.

ತಮ ತಮ ವಾಹನಗಳನ್ನು ಶುಚಿಗೊಳಿಸಿ, ಶೃಂಗಾರ ಮಾಡಿ ಕೆಲವರು ಮನೆಗಳ ಬಳಿಯೇ ಪೂಜೆ ಮಾಡಿದರೆ ಇನ್ನೂ ಕೆಲವರು ಪ್ರಮುಖ ದೇವಾಲಯಗಳ ಬಳಿ ವಾಹನಗಳಿಗೆ ಕುಂಬಳಕಾಯಿ ಹೊಡೆಯುವ ಮೂಲಕ ಪೂಜೆ ಮಾಡಲಾಯಿತು. ನಗರದ ಸರ್ಕಲ್ ಮಾರಮ, ಗಾಳಿ ಆಂಜನೇಯ ದೇವಾಲಯ, ವಿಜಯನಗರದ ಮಾರುತಿ ಮಂದಿರ, ಬನಶಂಕರಿ ದೇವಾಲಯ, ರಾಜಾಜಿನಗರದ ರಾಮ ಮಂದಿರ, ಗವಿ ಗಂಗಾಧರೇಶ್ವರ, ಕಾಡುಮಲ್ಲೇಶ್ವರ ಸೇರಿದಂತೆ ವಿವಿಧ ದೇವಾಲಯಗಳಲ್ಲಿ ವಿಶೇಷ ಹೂವಿನ ಅಲಂಕಾರ ಮಾಡಲಾಗಿದ್ದು, ಮುಂಜಾನೆಯಿಂದಲೇ ಪೂಜಾ ಕಾರ್ಯಗಳು ನೆರವೇರಿದವು.

ಇಂದು ನಾಳೆ ರಜೆ ಇರುವುದರಿಂದ ಬೆಳಗ್ಗೆಯೇ ಜನರು ವಾಹನಗಳಿಗೆ ಪೂಜೆ ಮಾಡಿ ಊರು, ದೇವಾಲಯ, ಪ್ರವಾಸಿ ತಾಣಗಳತ್ತ ಪ್ರಯಾಣ ಮುಂದುವರೆಸಿದರು.

**ಸರ್ವಿಸ್ ಸೆಂಟರ್‌ಗಳಲ್ಲಿ ಸಾಲು:**ಜನರು ತಮ ವಾಹನಗಳನ್ನು ವಾಶ್ ಮಾಡಲು ನಗರದ ವಾಟರ್ ಸರ್ವಿಸ್ ಸೆಂಟರ್‌ಗಳ ಮುಂದೆ ಸರದಿ ಸಾಲಿನಲ್ಲಿ ನಿಂತು ವಾಹನಗಳನ್ನು ವಾಶ್ ಮಾಡಿಸಿಕೊಂಡು ಹೋಗುತ್ತಿದ್ದ ದೃಶ್ಯಗಳು ಕಂಡು ಬಂದವು.

# ವಿವಿಧ ಕ್ರೀಡಾಂಗಣ ಕಾಮಗಾರಿಗಳ ಪರಿಶೀಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.1**– ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನರ್ದೇಶಕರಾದ ವಿರೇಶ ನಾಯಕ ಅವರು ಸೆಪ್ಟೆಂಬರ್ 30ರ ಮಂಗಳವಾರ ದಂದು ಗ್ರಾಮೀಣ ಪ್ರದೇಶದಲ್ಲಿ ಪ್ರವಾಸ ಕೈಗೊಂಡು ಇಲಾಖೆಯ ಕ್ರೀಡಾಂಗಣ ಕಾಮಗಾರಿಗಳನ್ನು ಪರಿಶೀಲನೆ ಮಾಡಿದರು.

ಮೊದಲು ಜಿಲ್ಲೆಯ ಸಿರವಾರ ಪಟ್ಟಣದ ಹೊರ ವಲಯದಲ್ಲಿ ಸುಮಾರು 8 ಎಕರೆ ವಿಸ್ತರ್ಣದ ನರ್ಮಾಣವಾಗುತ್ತಿರುವ ತಾಲೂಕು ಕ್ರೀಡಾಂಗಣ ಸ್ಥಳಕ್ಕೆ ಭೇಟಿ ಪರಿಶೀಲಿಸಿ, ಕಾಮಗಾರಿಯು ಗುಣಮಟ್ಟದ ದಿಂದ ಹಾಗೂ ನಿಗದಿತ ಸಮಯದಲ್ಲಿ ಪರ್ಣಗೊಳಿಸುವಂತೆ ಪಿಡಬ್ಲ್ಯೂಡಿ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಕವಿತಾಳ ಪಟ್ಟಣದಲ್ಲಿ ನೂತನವಾಗಿ ನರ್ಮಾಣವಾಗುತ್ತಿರುವ ಕಾಮಗಾರಿಯಯ ಪರಿಶೀಲಿಸಿ ಗ್ರಾಮೀಣ ಕ್ರೀಡಾಪಟುಗಳಿಗೆ ಬೇಕಾಗುವ ಎಲ್ಲಾ ರೀತಿಯ ಕ್ರೀಡಾಂಗಣವನ್ನು ನರ್ಮಿಸಿ ಅನುಕೂಲ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಸಹಾಯಕ ಅಭಿಯಂತರರಾದ ಸಂಭವು ಸೇರಿದಂತೆ ಇತರರು ಇದ್ದರು.

## ಮೊದಲನೇಯ ಪುಟದಿಂದ

# ಸಿಎಂ ವೈಮಾನಿಕ ಸಮೀಕ್ಷೆ

ವೈಮಾನಿಕ ಸಮೀಕ್ಷೆಗಳ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಲಬುರಗಿಗೆ ಆಗಮಿಸಿ, ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಕೈಕೊಳ್ಳಬೇಕಾದ ತುರ್ತು ಕ್ರಮಗಳ ಬಗ್ಗೆ ಕಲಬುರಗಿ, ಬೀದರ್, ವಿಜಯಪುರ, ಯಾದಗಿರಿ, ಜಿಲ್ಲೆಗಳ ಜಿಲ್ಲಾಧಿಕಾರಿಗಳು ಜಿಪಂ ಸಿಒಗಳು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಮುಖ್ಯಸ್ಥರುಗಳು ಸಭೆ ನಡೆಸಿ, ಪ್ರವಾಹ ಪರಿಸ್ಥಿತಿಯನ್ನು ನಿರ್ವಹಿಸಲು ಕೈಗೊಳ್ಳಬೇಕಾದ ತುರ್ತು ಕ್ರಮಗಳ ಬಗ್ಗೆ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಭೆಯಲ್ಲಿ ಸಚಿವರುಗಳಾದ ಕೃಷ್ಣಬೈರೇಗೌಡ, ಪ್ರಿಯಾಂಕಾ ಖರ್ಗೆ, ಈಶ್ವರ್ ಖಂಡ್ರೆ, ಡಾ. ಶರಣ ಪ್ರಕಾಶ್ ಪಾಟೀಲ್, ಎಂಬಿ ಪಾಟೀಲ್, ಚಲುವರಾಯಸ್ವಾಮಿ, ಭೈರತಿ ಸುರೇಶ್, ಕಲ್ಯಾಣ ಕರ್ನಾಟಕ ಮಂಡಳಿ ಅಧ್ಯಕ್ಷ ಡಾ. ಅಜಯ್ ಸಿಂಗ್ ಸೇರಿದಂತೆ ಹಲವು ಶಾಸಕರು ಭಾಗಿಯಾಗಿದ್ದರು.

ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಮಾರೋಪಾದಿಯಲ್ಲಿ ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರವಾಹದಿಂದ ಯಾವುದೇ ರೀತಿಯ ಪ್ರಾಣ ಹಾನಿಯಾಗದಂತೆ ಎಚ್ಚರ ವಹಿಸುವಂತೆಯೂ ಸೂಚನೆ ನೀಡಿದರು.

ಪ್ರವಾಹ ಸಂತ್ರಸ್ತರಿಗೆ ಕೂಡಲೇ ಪರಿಹಾರ ಹಣವನ್ನು ಬಿಡುಗಡೆ ಮಾಡುವಂತೆಯೂ ಸೂಚಿಸಿದ ಅವರು, ಪ್ರವಾಹದಿಂದ ಮನೆ ಕಳೆದುಕೊಂಡವರಿಗೆ ಮನೆ ನಿರ್ಮಿಸಲು ಹಣ ಬಿಡುಗಡೆ ಮಾಡುವಂತೆಯೂ ಸೂಚನೆ ನೀಡಿದರು.

ಭೀಮಾ ತೀರದ ಹಲವು ಹಳ್ಳಿಗಳು ಪ್ರವಾಹದಿಂದ ಜಲಾವೃತಗೊಂಡಿರುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಕೈಗೊಂಡಿರುವ ಪರಿಹಾರ ಕ್ರಮಗಳ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದುಕೊಂಡು, ಪ್ರವಾಹದಿಂದ ಯಾವುದೇ ಜೀವ ಹಾನಿಯಾಗದಂತೆ ಎಚ್ಚರ ವಹಿಸಿ, ಸಂತ್ರಸ್ತರ ನೆರವಿಗೆ ನಿಲ್ಲಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಲಾವೃತಗೊಂಡಿರುವ ಗ್ರಾಮಸ್ಥರನ್ನು ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಿ, ಅವರಿಗೆ ಆಹಾರ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಕರ್ಯಗಳನ್ನು ಒದಗಿಸಬೇಕು.

ಈಗಾಗಲೇ ತೆರೆದಿರುವ ಕಾಳಜಿ ಕೇಂದ್ರಗಳಲ್ಲಿ ಪ್ರವಾಹ ಸಂತ್ರಸ್ತರಿಗೆ ಏನೆಲ್ಲಾ ಸೌಕರ್ಯಗಳನ್ನು ಒದಗಿಸಲಾಗಿದೆ ಎಂಬ ಬಗ್ಗೆಯೂ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಧಿಕಾರಿಗಳಿಗೆ ಮಾಹಿತಿ ಪಡೆದುಕೊಂಡು, ಪ್ರವಾಹ ಪರಿಹಾರ ಕಾರ್ಯಗಳನ್ನು ಸಮಾರೋಪಾದಿಯಲ್ಲಿ ಕೈಗೊಳ್ಳುವಂತೆ ಸೂಚನೆ ನೀಡಿದರು.

# ರೈತರ ನೆರವಿಗೆ ಸರ್ಕಾರ ಧಾವಿಸಲಿ: ವಿಜಯೇಂದ್ರ

ತಮ್ಮ ರಾಜಕೀಯ ಜೀವನದ ಬಗ್ಗೆ ಮಾತನಾಡಿದ ವಿಜಯೇಂದ್ರ, "ನಾನು ಪ್ರಥಮ ಬಾರಿಗೆ ಶಾಸಕನಾಗಿದ್ದರೂ, ರಾಜ್ಯದಲ್ಲಿ ಬಿಜೆಪಿ ಪಕ್ಷದ ಅಧ್ಯಕ್ಷನಾಗಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಲು ಗುರುಗಳ ಆಶೀರ್ವಾದದಿಂದ ಮಾತ್ರ ಸಾಧ್ಯವಾಯಿತು. ನಮ್ಮ ತಂದೆ ಯಡಿಯೂರಪ್ಪನವರು ವಿರೋಧ ಪಕ್ಷದಲ್ಲಿದ್ದಾಗ ರೈತರ ಪರ, ಶೋಷಿತರ, ಮಹಿಳೆಯರ ಪರ ಅನೇಕ ಹೋರಾಟಗಳನ್ನು ಮಾಡಿದರು. 4 ಬಾರಿ ಮುಖ್ಯಮಂತ್ರಿಗಳಾದಾಗ ರೈತರಿಗೆ ಉಚಿತ ವಿದ್ಯುತ್, ರೈತರಿಗಾಗಿ ಪ್ರತ್ಯೇಕ ಬಜೆಟ್ ನೀಡಿದರು. ಆದ್ದರಿಂದಲೇ ರಾಜ್ಯದ ಯಾವುದೇ ಜಿಲ್ಲೆಗೆ ಹೋದರೂ ಜನರು ನನ್ನನ್ನು ಆದರದಿಂದ ಸ್ವಾಗತಿಸುತ್ತಾರೆ" ಎಂದು ತಿಳಿಸಿದರು.

ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತಿವೃಷ್ಟಿಯಿಂದ ರೈತರು ತೀವ್ರ ಸಂಕಷ್ಟದಲ್ಲಿದ್ದು, ಸರ್ಕಾರ ಕೂಡಲೇ ಸ್ಪಂದಿಸಿ ಪರಿಹಾರ ನೀಡಬೇಕು. ಎಲ್ಲ ಧರ್ಮಗಳಿಗಿಂತ ಮಾನವ ಧರ್ಮ ದೊಡ್ಡದು, ಮಠಗಳು ಮಾನವ ಧರ್ಮವನ್ನು ಎತ್ತಿಹಿಡಿಯುವ ಕೆಲಸ ಮಾಡುತ್ತಿವೆ ಎಂದರು.

ಶಾಸಕ ಡಾ. ಶಿವರಾಜ ಪಾಟೀಲ್ ಸರ್ಕಾರ ಮಾಡುವ ಕಾರ್ಯಗಳನ್ನು ಮಠಗಳು ಮಾಡುತ್ತ ಬಂದಿವೆ. ನಾವೆಲ್ಲ ಮಠದ ಭಕ್ತರು ಗಟ್ಟಿಯಾಗಿದ್ದಾಗ ಮಾತ್ರ ಮಠಗಳು ಬೆಳೆದು ಸಮಾಜ ಸೇವಾ ಕಾರ್ಯಗಳನ್ನು ಮಾಡಲು ಸಾಧ್ಯವಾಗುತ್ತದೆ ಎಂದರು.

ಮಾಜಿ ಸಚಿವ ಶಿವನಗೌಡ ನಾಯಕ ಮಾತನಾಡಿ,ಮುಂದಿನ ಮುಖ್ಯಮಂತ್ರಿಗಳಾದ ಬಿ.ವೈ.ವಿಜಯೇಂದ್ರ ಅವರು ರಾಜ್ಯದ ಮುಖ್ಯಮಂತ್ರಿಗಳಾಗಿ ಈ ಭಾಗದ ರೈತರ ಬಹುದಿನಗಳ ಕನಸಾದ ನವಲಿ ಜಲಾಶಯ ನಿರ್ಮಾಣಕ್ಕೆ ಪ್ರಥಮದಲ್ಲಿಯೇ ಅಡಿಗಲ್ಲು ಹಾಕಿ ಚಾಲನೆ ನೀಡಲಿದ್ದಾರೆ. ರಾಜ್ಯದ ಜನರು ಬಿ.ವೈ.ವಿಜಯೇಂದ್ರ ಅವರಲ್ಲಿ ಯಡಿಯೂರಪ್ಪನವರನ್ನು ಕಾಣುತ್ತಿದ್ದಾರೆ. ಇವರು ಎಲ್ಲ ಸಮುದಾಯಗಳನ್ನು ಆಪ್ತತೆಯಿಂದ ಕಾಣುವ ಜಾತ್ಯತೀತ ನಾಯಕರು ಎಂದು ಬಣ್ಣಿ ಸಿದರು.

ಸರ್ವಧರ್ಮ ಸಮೇಳನದಲ್ಲಿ ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಬೃಹನ್ಮಠ ನೀಲಗಲ್ ಸಂಸ್ಥಾನ ಮಠದ ಶ್ರೀ ರೇಣುಕಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು, ಚೀಕಲಪರ್ವಿ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು, ಹಜರತ್ ಖಾದರಲಿಂಗ ಸಾಹೇಬ್ ಜಗದ್ಗುರು ದರ್ಗಾಕೌತಾಳಂನ ಗುರುಗಳಾದ ಹಜರತ್ ಖ್ವಾಜಾ ಸೈಯಾದ್ ಶಾಹ ಜೈನುಲಾಬೆದಿನ್ ಹುಸೇನ್ ಚಿಸ್ತಿ ಸಜ್ಜಾದ್ ನಾಶೀನ್ ಮತವಾಲೆ, ಕಾಲಭೈರವ ಮಠದ ಸ್ವಾಮಿಗಳು ಹಾಗೂ ಫಾ.ಸುರೇಶ ವಿನ್ಸೆಂಟ್ (ಸೆಂಟಮೇರಿಸ್ ಚರ್ಚ್ ಮಾನ್ವಿ) ಅವರು ಧರ್ಮ ಸಂದೇಶವನ್ನು ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀಮಠದ ವತಿಯಿಂದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ವೈದ್ಯಕೀಯ ಕ್ಷೇತ್ರದಲ್ಲಿನ ಸಾಮಾಜಿಕ ಸೇವೆಯನ್ನು ಗುರುತಿಸಿ ಸೂಲಗಿತ್ತಿ ಶಿವುಬಾಯಿ ಬಸವನಗೌಡ ಪಾಟೀಲ್ ಮಸ್ಕಿ ಅವರಿಗೆ ರಾಜ್ಯಮಟ್ಟದ ಕಲ್ಮಠ ಸುವರ್ಣಸಾಧಕಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಸಂಗೀತ ಶಿಕ್ಷಕರಾದ ವಿರೂಪಾಕ್ಷಯ್ಯ ವಂದಲಿಯಾ ಅವರಿಗೂ ವಿಶೇಷ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಸಂಸದರಾದ ಬಿ.ವಿ.ನಾಯಕ, ಮಾಜಿ ಶಾಸಕರಾದ ಬ್ಯಾಗವಾಟ ಬಸವನಗೌಡ, ಪ್ರತಾಪಗೌಡ ಪಾಟೀಲ್, ಗಂಗಾಧರನಾಯಕ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ 15.50 ರೂ. ಹೆಚ್ಚಳ

ಸಾಧ್ಯತೆಯಿದೆ. ಈ ವೆಚ್ಚಗಳಲ್ಲಿ ಕೆಲವು ಅಂತಿಮವಾಗಿ ಗ್ರಾಹಕರಿಗೆ ವರ್ಗಾಯಿಸಲ್ಪಡಬಹುದು ಎಂದು ಉದ್ಯಮ ತಜ್ಞರು ಹೇಳಿದ್ದಾರೆ.ತೈಲ ಮಾರುಕಟ್ಟೆ ಕಂಪನಿಗಳು ಎಲ್‌ಪಿಜಿ ಸಿಲಿಂಡರ್ ಬೆಲೆಗಳನ್ನು ನಿಯತಕಾಲಿಕವಾಗಿ ಪರಿಶೀಲಿಸುತ್ತವೆ, ಸಾಮಾನ್ಯವಾಗಿ ಪ್ರತಿ ತಿಂಗಳ ಆರಂಭದಲ್ಲಿ, ಜಾಗತಿಕ ಕಚ್ಚಾ ತೈಲ ಬೆಲೆಗಳು ಮತ್ತು ವಿದೇಶಿ ವಿನಿಮಯ ದರಗಳಲ್ಲಿನ ಏರಿಳಿತಗಳನ್ನು ಆಧರಿಸಿ ಈ ಇತ್ತೀಚಿನ ಹೆಚ್ಚಳವು ಈ ವರ್ಷದ ಆರಂಭದಲ್ಲಿ ಕಂಡುಬಂದ ಇದೇ ರೀತಿಯ ಹೊಂದಾಣಿಕೆಗಳನ್ನು ಅನುಸರಿಸುತ್ತದೆ. ಇದು ವಾಣಿಜ್ಯ ಬಳಕೆದಾರರನ್ನು ಜಾಗತಿಕ ಇಂಧನ ಮಾರುಕಟ್ಟೆ ಬದಲಾವಣೆಗಳಿಗೆ ಸೂಕ್ಷವಾಗಿರಿಸುತ್ತದೆ.

ಸರ್ಕಾರವು ದೇಶೀಯ ಅಡುಗೆ ಅನಿಲ ಸುಂಕಗಳನ್ನು ಬದಲಾಯಿಸದಿರಲು ನಿರ್ಧರಿಸಿದ್ದರೂ, ವಾಣಿಜ್ಯ ಎಲ್‌ಪಿಜಿ ಬೆಲೆಗಳಲ್ಲಿನ ಪುನರಾವರ್ತಿತ ಹೆಚ್ಚಳವು ವ್ಯವಹಾರಗಳ ಮೇಲಿನ ಹೆಚ್ಚುತ್ತಿರುವ ಇಂಧನ ವೆಚ್ಚಗಳ ಒತ್ತಡವನ್ನು ಎತ್ತಿ ತೋರಿಸುತ್ತದೆ. ಮುಂದಿನ ಪರಿಷ್ಕರಣೆಗಳು ಅಂತರರಾಷ್ಟ್ರೀಯ ಮಾರುಕಟ್ಟೆಗಳ ಚಲನೆ ಮತ್ತು ಮುಂಬರುವ ತಿಂಗಳುಗಳಲ್ಲಿ ಆಮದು ಬೆಲೆಗಳನ್ನು ಅವಲಂಬಿಸಿರುತ್ತದೆ.

# ಮೈಸೂರು ಅರಮನೆಯಲ್ಲಿ ಆಯುಧ ಪೂಜೆ ಸಂಭ್ರಮ

**ಮೈಸೂರು,ಅ.1–**ಎಲ್ಲೆಡೆ ಇಂದು ಆಯುಧ ಪೂಜೆ ಸಂಭ್ರಮ. ಮೈಸೂರಿನ ಅಂಬಾವಿಲಾಸ ಅರಮನೆಯಲ್ಲಿ ಆಯುಧ ಪೂಜೆ ಕಳೆಗಟ್ಟಿದ್ದು, ಮಹಾರಾಜ ಯದುವೀರ್‌ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಪೂಜಾ ಕಾರ್ಯ ನೆರವೇರಿಸಿದರು.ಇಂದು ಬೆಳಗ್ಗೆ 6 ಗಂಟೆಯಿಂದ ಚಂಡಿಕಾ ಹೋಮ ಆರಂಭವಾಗಿ ಬಳಿಕ 7.55 ಕ್ಕೆ ಕೋಡಿ ಸೋಮೇಶ್ವರ ದೇವಾಲಯಕ್ಕೆ ಪಲ್ಲಕ್ಕಿಯಲ್ಲಿ ಆಯುಧಗಳನ್ನು ಕೊಂಡೊಯ್ಯಲಾಯಿತು.



ಈ ಆಯುಧಗಳನ್ನು ಶುಚಿಗೊಳಿಸಿ ವಾಪಸ್ ಅರಮನೆಗೆ ರವಾನಿಸಲಾಗುತ್ತದೆ. ಅರಮನೆಯ ಆನೆ ಬಾಗಿಲು ಮೂಲಕ ಈ ಆಯುಧಗಳನ್ನು ಕಲ್ಯಾಣ ಮಂಟಪಕ್ಕೆ ಕೊಂಡೊಯ್ದು ಜೋಡನೆ ಮಾಡಿ ಸಿಂಹಾಸನಕ್ಕೆ ಜೋಡಿಸಿರುವ ಸಿಂಹಕ್ಕೆ ಪೂಜೆ ಮಾಡಲಾಯಿತು.ಆ ನಂತರ ರಾಜ ಪುರೋಹಿತರ ಮಾರ್ಗದರ್ಶನದಂತೆ ಯದುವೀರ ಒಡೆಯರ್ ಅವರು ಆಯುಧ ಪೂಜೆ ನೆರವೇರಿಸಿದರು.

ಕರಿಕಲ್ಲು ತೊಟ್ಟಿಯಲ್ಲಿ ಯದುವೀರ್ ಒಡೆಯರ್ ಅವರು ಪೂಜೆ ಸಲ್ಲಿಸಿದರು.ಇದೇ ವೇಳೆ ಪಟ್ಟದ ಆನೆ,ಕುದುರೆ,ಒಂಟೆ,ಹಸು ಹಾಗೂ ಅರಮನೆಯಲ್ಲಿರುವ ಐಷಾರಾಮಿ ಕಾರು ಮತ್ತು ಇತರೆ ವಾಹನಗಳಿಗೂ ಪೂಜೆ ನೆರವೇರಿಸಲಾಯಿತು.

ಸಂಜೆ ಖಾಸಗಿ ದರ್ಬಾರ್ ನಡೆಯಲಿದ್ದು,ಬೆಳ್ಳಿದ್ವಾರದಿಂದ ರಾಜರು ಪ್ರವೇಶಿಸುವ ಸಂದರ್ಭದಲ್ಲಿ ಹಸ್ತಲಾಘವದ ಮೂಲಕ ಸಿಂಹಾಸನದ ಏಳು ಮೆಟ್ಟಿಲು ಏರಿ ದರ್ಬಾರ್ ಮಾಡುತ್ತಾರೆ.

ದರ್ಬಾರ್ ಬಳಿಕ ಸಂಸ್ಥಾನ ಗೀತೆಯನ್ನು ಪೊಲೀಸ್ ಬ್ಯಾಂಡ್‌ನಲ್ಲಿ ನುಡಿಸಲಾಗುತ್ತದೆ. ಸಭಾ ಸದಸ್ಯರು ರಾಜರಿಗೆ ಗೌರವ ಮತ್ತು ರಕ್ಷೆ ನೀಡುತ್ತಾರೆ. ಆ ವೇಳೆ ಒಡೆಯರ್ ಅವರಿಗೆ ಪರಾಕ್‌ಗಳನ್ನು ಕೂಗಲಾಗುತ್ತದೆ. ರಾಣಿಯವರು ಬಂದು ರಾಜರಿಗೆ ನಮಸ್ಕರಿಸಿದ ಬಳಿಕ ದರ್ಬಾರ್ ಮುಗಿಸಿ ಪೂಜೆ ಮಾಡಲಾಗುತ್ತದೆ. ಬಳಿಕ ಕಂಕಣ ವಿಸರ್ಜನೆ ಮಾಡಿದಾಗ ನವರಾತ್ರಿ ಪೂಜೆ ಸಂಪನ್ನವಾಗುತ್ತದೆ. ಆ ಸಂದರ್ಭದಲ್ಲಿ ರಾಣಿಯವರಿಂದ ಮಹಾರಾಜರ ಪಾದ ಪೂಜೆ ನೆರವೇರಿಸಿ, ಆಯುಧ ಪೂಜೆ ದಿನದ ಎಲ್ಲಾ ಪೂಜಾ ಕೈಂಕರ್ಯಗಳು ಮುಕ್ತಾಯವಾಗುತ್ತವೆ.

# ಅಸಮಾನತೆ ಹೋಗಲಾಡಿಸಲು ಸಮೀಕ್ಷೆ ಅನಿವಾರ್ಯ : ಸಿಎಂ ಸಿದ್ದರಾಮಯ್ಯ



**ಬೆಂಗಳೂರು, ಅ.1–** ಸಮಾಜದಲ್ಲಿ ಅಸಮಾನತೆಯಿದ್ದು, ಅದನ್ನು ಹೋಗಲಾಡಿಸಲು ಸಮೀಕ್ಷೆಯ ಅಂಕಿಅಂಶಗಳು ಅವಶ್ಯಕ. ಯಾವ ಜಾತಿಯ ಜನರಲ್ಲಿ ಅನಕ್ಷರತೆ, ಬಡತನ, ಜಮೀನು ಇತ್ಯಾದಿಗಳಿಲ್ಲ ಎಂಬುದರ ಮಾಹಿತಿ ತಿಳಿದುಕೊಳ್ಳಲು ಸಮೀಕ್ಷೆ ಅನಿವಾರ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿ ಕೊಂಡಿದ್ದಾರೆ.

ಬೆಂಗಳೂರಿನ ಎಂ.ಎಸ್. ರಾಮಯ್ಯ ಆಸ್ಪತ್ರೆಯ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಸಮೀಕ್ಷೆಯಿಂದ ಸಮಾಜದ ಉದ್ಧಾರ ಸಾಧ್ಯವಿಲ್ಲ ಎಂದು ಕೇಂದ್ರಸಚಿವ ಹೆಚ್.ಡಿ.ಕುಮಾರಸ್ವಾಮಿಯವರು ಹೇಳಿದ್ದಾರೆ. ಪಾಪ ಅವರಿಗೆ ಗೊತ್ತಿಲ್ಲ, ಸಮಾಜದಲ್ಲಿ ಅಸಮಾನತೆಯಂತೂ ಇದೆ. ಸಮಾನತೆ ನಿರ್ಮಾಣವಾಗಬೇಕು ಎಂಬುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯವಾಗಿದೆ ಎಂದರು.

ಸಮಾನತೆ ನಿರ್ಮಾಣವಾಗಬೇಕಾದರೆ,ಅಸಮಾನತೆ ತೊಲಗಬೇಕು. ಇದಕ್ಕಾಗಿ ದುರ್ಬಲರು ಸಮಾಜದ ಮುಖ್ಯವಾಹಿನಿಗೆ ಬರುವಂತಾಗಬೇಕು. ಅದಕ್ಕಾಗಿ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಲು ದತ್ತಾಂಶಗಳ ಅಗತ್ಯವಿದೆ. ಅದನ್ನು ಸಂಗ್ರಹಿಸಲು ಸಮೀಕ್ಷೆ ನಡೆಸುತ್ತಿದ್ದೇವೆ ಎಂದರು.

ಸಮಾಜದಲ್ಲಿ ಅಸಮಾನತೆ ನಿರಂತರವಾಗಿರಬೇಕು ಎಂಬುದು ಬಿಜೆಪಿಯವರ ಬಯಕೆ. ನಿರ್ದಿಷ್ಟವಾದ ಜಾತಿಯೊಂದು ಉತ್ತುಂಗದಲ್ಲಿರಬೇಕೆಂದು ಬಿಜೆಪಿ ಬಯಸುತ್ತದೆ ಎಂದ ಅವರು, ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಹಾಗೂ ರಾಜ್ಯ ಸರ್ಕಾರದ ಒತ್ತಾಯದ ಮೇರೆಗೆ, ಕೇಂದ್ರ ಸರ್ಕಾರವೂ ಜಾತಿಗಣತಿ ನಡೆಸಲು ಮುಂದಾಗಿದೆ ಎಂದರು.

ರಾಜ್ಯದ ಉಳಿದ ಜಿಲ್ಲೆಗಳಿಗೆ ಹೋಲಿಸಿದರೆ, ಉತ್ತರ ಕರ್ನಾಟಕದ ಸುಮಾರು 9 ಜಿಲ್ಲೆಗಳಲ್ಲಿ ಶೇ.95 ರಷ್ಟು ಪ್ರವಾಹ ಸಂಭವಿಸಿದೆ. ಬೆಳಗಾವಿ, ವಿಜಯಪುರ, ಬಾಗಲಕೋಟೆ, ಬೀದರ್, ಯಾದಗಿರಿ, ರಾಯಚೂರು, ಹುಬ್ಬಳ್ಳಿ ಧಾರವಾಡ, ಗದಗ ಜಿಲ್ಲೆಗಳಲ್ಲಿ ನೆರೆ ಹಾವಳಿಯಾಗಿದೆ ಎಂದರು.ನಮ ಕುಮಾರಸ್ವಾಮಿ ಹೇಳಿಕೆ ಸ್ವಾಗತಾರ್ಹ ರಾಜ್ಯ ಸರ್ಕಾರ ಸಂಘರ್ಷದ ಹಾದಿ ಬಿಟ್ಟು ಪ್ರಸ್ತಾವನೆ ಸಲ್ಲಿಸಿದರೆ ಕೇಂದ್ರ ಸರ್ಕಾರದಿಂದ ಪರಿಹಾರ ಕೊಡಿಸುತ್ತೇವೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಹೇಳಿಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ನಮ ಕುಮಾರಸ್ವಾಮಿ ಅವರ ಹೇಳಿಕೆಗೆ ಸ್ವಾಗತಾರ್ಹ. ನಾವು ಕೇಂದ್ರಕ್ಕೆ ಮನವಿ ಸಲ್ಲಿಸುಣತ್ತೇವೆ. ಪರಿಹಾರ ಕೊಡಿಸಲಿ ಎಂದರು.

ಆದರೆ 2023ರಲ್ಲಿ ರಾಜ್ಯಕ್ಕೆ ಬರಗಾಲ ಬಂದಿದ್ದಾಗ, ಕೇಂದ್ರ ಸರ್ಕಾರದವರು ಬರಪರಿಹಾರ ನೀಡದೇ, ಸುಪ್ರಿಂಕೋರ್ಟ್‌ನ ಬಳಿ ಧಾವಿಸಿ, ಪರಿಹಾರ ತೆಗೆದು ಕೊಳ್ಳುವಂತಾಯಿತು. ಪ್ರಸ್ತುತ ಕುಮಾರಸ್ವಾಮಿಯವರು ಪರಿಹಾರ ಕೊಡಿಸುವುದಾದರೆ ಸ್ವಾಗತಾರ್ಹ ಎಂದರು.

ಮೈಸೂರು ದಸರಾ ಆಚರಣೆ ಸಲುವಾಗಿ ಇಂದು ತಾವು ಅಲ್ಲಿಗೆ ತೆರಳುತ್ತಿದ್ದು, ಜಂಬೂ ಸವಾರಿ ಹಾಗೂ ಪಂಜಿನ ಕವಾಯಿತಿನಲ್ಲಿ ಭಾಗವಹಿಸುತ್ತೇನೆ ಎಂದರು.

ಬೆಂಗಳೂರಿನ ಎಂ.ಎಸ್. ರಾಮಯ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

# ಔಷಧಿ ದುರ್ಬಳಕೆಗೆ ಕಡಿವಾಣ ಅಗತ್ಯವಾಗಿದೆ ಡಾ. ಶಂಕರ್ ನಾಯ್ಕ




**ಹೊಸಪೇಟೆ, ಅ.1–** ಔಷಧಿಗಳ ದುರ್ಬಳಕೆ ತಡೆಗಟ್ಟಲು ಹಾಗೂ ಔಷಧಿಗಳ ಬಳಕೆಯ ಕುರಿತು ಅರಿವು ಮೂಡಿಸಲು ಫಾರ್ಮಸಿಸ್ಟ್ ದಿನ ಪೂರಕವಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಲ್. ಆರ್.ಶಂಕರನಾಯ್ಕ ಹೇಳಿದರು.

ನಗರದ ಜಿಲ್ಲಾ ಒಳಕ್ರೀಡಾಂಗಣದಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ವತಿಯಿಂದ ಏರ್ಪಡಿಸಿದ್ದ ವಿಶ್ವ ಫಾರ್ಮಸಿಸ್ಟ್ ದಿನಾಚರಣೆ ಮಾತ್ತು ನಿರಂತರ ಕಲಿಕಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಂಗಳವಾರ ಅವರು ಮಾತನಾಡಿದರು. ವಿಶ್ವ ಪಾರ್ಮಸಿಸ್ಟ್ ದಿನಾಚರಣೆಗೆ 'ಆರೋಗ್ಯದ ಬಗ್ಗೆ ಯೋಚಿಸಿ, ಔಷಧಿಕಾರರ ಬಗ್ಗೆ ಯೋಚಿಸಿ' ಎಂಬುದು ಈ ವರ್ಷದ ಸಂದೇಶವಾಗಿದೆ. ವೈದ್ಯರಷ್ಟೇ ಫಾರ್ಮಸಿಸ್ಟ್‌ಗಳ ಪಾತ್ರ ಪ್ರಮುಖವಾಗಿದೆ. ರೋಗಿಗಳಿಗೆ ಅಗತ್ಯ ಔಷಧಿಗಳ ವಿತರಣೆಗೆ ಹಾಗೂ ರೋಗ ನಿಯಂತ್ರಣಕ್ಕೆ ಫಾರ್ಮಸಿಸ್ಟ್‌ಗಳು ಸೇವೆ ಸ್ಮರಣೀಯ.

ಎಲ್ಲಾ ಔಷಧಿ ಅಂಗಡಿಗಳಿಗೆ ಸರ್ಕಾರವು ಸೂಚಿಸಿದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಆಸ್ಪತ್ರೆಗಳಲ್ಲಿ ಒಳರೋಗಿಗಳಿಗೆ ಔಷಧ ನೀಡುವಲ್ಲಿ ನರ್ಸ್‌ಗಳ ಸಹಕಾರವೂ ಮುಖ್ಯವಾಗಿದೆ. ಪ್ರತಿಯೊಬ್ಬರು ಸಹ ವಿಶ್ವದ ಜನರ ಆರೋಗ್ಯವನ್ನು ವೃದ್ಧಿಸುವ ಔಷಧ ತಜ್ಞರನ್ನು ಗೌರವಿಸಬೇಕು ಎಂದರು.

ಸಹಾಯಕ ಔಷಧ ನಿಯಂತ್ರಕರಾದ ಜಿ.ವಿ.ನಾರಾಯಣ ರೆಡ್ಡಿ ನಿರಂತರ ಕಲಿಕಾ ಕಾರ್ಯಕ್ರಮದಡಿ ಉಪನ್ಯಾಸ ನೀಡಿ ಮಾತನಾಡಿ, ಔಷಧಗಳು ಮತ್ತು ಸೌಂದರ್ಯವರ್ಧಕಗಳ ಕಾಯ್ದೆ 1940 ರ ಮಾರ್ಗಸೂಚಿ ಅನ್ವಯ ಪಶು ಔಷಧಗಳನ್ನು ಪ್ರತ್ಯೇಕವಾಗಿ ದಾಸ್ತಾನು ಮಾಡಿ ನಾಮ ಫಲಕ ಹಾಕಬೇಕು ಮತ್ತು ಅವಧಿ ಮೀರಿದ ಔಷಧಗಳನ್ನು ಯಾವುದೇ ಕಾರಣಕ್ಕೂ ಮಾರಾಟ ಮಾಡಬಾರದು. ಅಂಗಡಿಗಳಲ್ಲಿ ಶೀತಕ ಯಂತ್ರವನ್ನು ಅಳವಡಿಸಬೇಕು. ವಿದ್ಯಾಭ್ಯಾಸ ಮಾಡಿದ ಅರ್ಹ ವ್ಯಕ್ತಿಗಳು ಔಷಧಿ ಅಂಗಡಿಗಳಲ್ಲಿ ನಿಯೋಜನೆ ಮಾಡುವುದು. ಮಾರಾಟದ ಬಿಲ್ಲನ್ನು ದ್ವಿಪ್ರತಿಗಳಲ್ಲಿ ಇರಿಸುವುದು. ಜಿಎಸ್‌ಟಿ ಖರೀದಿ ಬಿಲ್ಲುಗಳನ್ನು ಕ್ರಮಬದ್ಧವಾಗಿ ಸಂಗ್ರಹಿಸಿಡಬೇಕು. ಮಾರಾಟ ಮಳಿಗೆಯನ್ನು ಸ್ವಚ್ಛಯಿಂದ ನಿರ್ವಹಿಸಬೇಕು. ಶೆಡ್ಯೂಲ್ ಎಕ್ಸ್ ಅಡಿ ಬರುವ ಔಷಧಿಗಳನ್ನು ಪ್ರತ್ಯೇಕವಾಗಿ ದಾಸ್ತಾನು ಮಾಡಿ, ರಿಜಿಸ್ಟರ್ ಪುಸ್ತಕದಲ್ಲಿ ನಮೂದಿಸಬೇಕು ಎಂದು ಪಾರದರ್ಶಕ ಕೆಲಸ ಮಾಡುವಂತೆ ಸಲಹೆ ನೀಡಿದರು.

ವಿಭಾಗವಾರು ಹಿರಿಯ ಫಾರ್ಮಸಿಸ್ಟ್ ಪ್ರಶಸ್ತಿ ಪಡೆದ ಜನಾರ್ಧನ, ಎ.ಗಿರೀಧರ್ ಅವರನ್ನು ಕಾರ್ಯಕ್ರಮದಲ್ಲಿ ಗೌರವಿಸಿ ಸನ್ಮಾನಿಸಲಾಯಿತು. ಈ ವೇಳೆ ಔಷಧಿ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಎಂ.ಬಸವರಾಜ ರೆಡ್ಡಿ, ಜಿಲ್ಲಾ ಘಟಕದ ಅಧ್ಯಕ್ಷ ಜೆ.ಸಂತೋಷ್ ಕುಮಾರ್, ಜಿಲ್ಲಾ ಕಾರ್ಯದರ್ಶಿ ವಾಹಿದ್ ತಂಬ್ರಹಳ್ಳಿ, ಜಿಲ್ಲಾ ಘಟಕದ ಪದಾದಿಕಾರಿಗಳಾದ ರಾಜಶೇಖರ್ ಸ್ವಾಮಿ, ಮಲ್ಲಿಕಾರ್ಜುನ ಕೊತ್ತೂರು, ಚಿದಾನಂದ ಸ್ವಾಮಿ, ಪ್ರಶಾಂತ್ ಪೂಜಾರ್, ಹೊಸಪೇಟೆ ತಾಲೂಕು ಘಟಕದ ಅಧ್ಯಕ್ಷ ಸತೀಶ್ ವೇಮಲ್, ಉಪಾಧ್ಯಕ್ಷರಾದ ಪಿ.ಸುಬ್ರಮಣ್ಯ, ಪದಾಧಿಕಾರಿಗಳಾದ ಜಾವೇದ್ ಮಹಮ್ಮದ್, ಪ್ರಕಾಶ್ ಜಾಲಿ, ಪ್ರಶಾಂತ್, ಕಿರಣ್ ಕಲಾಲ್ ಸೇರಿದಂತೆ ಫಾರ್ಮಸಿ ಕಾಲೇಜಿನ ಪ್ರಾಚಾರ್ಯ ಶಂಕ್ರಯ್ಯ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಾಮಾಜಿಕ ಕಾರ್ಯಕ್ಕೆ ಸಂಘಟನೆ ಅವಶ್ಯ:ಗುಜ್ಜಾ



**ಸೈದಾಪುರ,ಅ.1–**ಗ್ರಾಮೀಣ ಪ್ರದೇಶಗಳಲ್ಲಿ ಧಾರ್ಮಿಕ, ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳಲು ಸಂಘಟನೆ ಅವಶ್ಯವಿದೆ, ಅದಕ್ಕೆ ಸಮಾಜದ ಹಿರಿಯರು ಮಾರ್ಗದರ್ಶನ ನೀಡಬೇಕು ಎಂದು ಆರ್ಯವೈಶ್ಯ ಸಮಾಜದ ನೂತನ ಅಧ್ಯಕ್ಷ ಕೃಷ್ಣಮೂರ್ತಿ ಗುಜ್ಜ ಅಭಿಪ್ರಾಯಪಟ್ಟರು.

ಪಟ್ಟಣದ ವಾಸವಿ ವಿದ್ಯಾ ಸಂಸ್ಥೆ ಆವರಣದಲ್ಲಿ ಆರ್ಯವೈಶ್ಯ ಸಮಾಜದ ನೂತನವಾಗಿ ಆಯ್ಕೆಯಾದ ಸೈದಾಪುರ ವಲಯದ ಪದಾಧಿಕಾರಿಗಳಿಗೆ ಆರ್ಯವೈಶ್ಯ ಯುವಜನ ಸಂಘದಿಂದ ಹಮ್ಮಿಕೊಂಡ ಸನ್ಮಾನ ಕರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ನಮ್ಮ ಕುಲದೇವತೆ ಕನ್ನಿಕಾ ಪರಮೇಶ್ವರಿ ವಾಸವಿ ಮಾತೆಯ ಇತಿಹಾಸ, ಸಂಸ್ಕಾರ, ಪರಂಪರೆ, ಸಂಸ್ಕೃತಿ ಬಗ್ಗೆ ಅರಿವು ಮೂಡಿಸಬೇಕು. ಇದಕ್ಕಾಗಿ ಸಮಾಜದ ಜನರು ವ್ಯವಸ್ಥಿತವಾಗಿ ಸಂಘಟಿತರಾಗಿ ಪ್ರತಿಯೊಬ್ಬರ ಸಮಸ್ಯೆಯನ್ನು ನಮ್ಮ ಸಮಸ್ಯೆ ಎಂದು ಬಗೆಹರಿಸುವ ಪ್ರಯತ್ನ ಮಾಡೋಣ ಎಂದು ತಿಳಿಸಿದರು.

ಇದಕ್ಕೂ ಮುಂಚಿತವಾಗಿ ನೂತನವಾಗಿ ಆಯ್ಕೆಯಾದ ಸೈದಾಪುರ ವಲಯದ ಆರ್ಯವೈಶ್ಯ ಸೇವಾ ಸಂಘದ ಪದಾಧಿಕಾರಿಗಳಿಗೆ ಯುವಜನ ಸಂಘದಿಂದ ಸನ್ಮಾನಿಸಲಾಯಿತು. ಈ ವೇಳೆ ಗೌರವಾಧ್ಯಕ್ಷ ಪಾಂಡುರಂಗಯ್ಯ ಗುಮಡಾಲ, ಉಪಾಧ್ಯಕ್ಷ ನರಸಿಂಹಲು ಕಲಕೊಂಡ, ಪ್ರಧಾನ ಕಾರ್ಯದರ್ಶಿ ಸುರೇಶ ಪುರಿ, ಸಹ ಕಾರ್ಯದರ್ಶಿ ಎಸ್.ಎ.ವಿಜಯಕುಮಾರ, ಕೋಶಾಧ್ಯಕ್ಷ ಕೆ.ಬಿ.ಗೋವರ್ಧನ, ಡಾ. ಶ್ರೀನಿವಾಸ ಪತ್ತಿ, ಯುವಜನ ಸಂಘದ ಅಧ್ಯಕ್ಷ ಭರತಕುಮಾರ ಗುಮಡಾಲ್, ಕಾರ್ಯದರ್ಶಿ ಶ್ರೀಧರ ಓಬಳಶೆಟ್ಟಿ, ಉಪಾಧ್ಯಕ್ಷ ವಿಠೋಬಯ್ಯ ಪಾಲದಿ, ವಿರೇಶ ಮಿರಿಯಾಲ್, ನರೇಶ ವರ್ಕೂರ ಸೇರಿದಂತೆ ಇತರರಿದ್ದರು.

ಯುವ ಮಾರ್ಗ

ಗುರುವಾರ: 02–10–2025

# ಖರ್ಗೆ ಕುಟುಂಬಕ್ಕೆ ಮೊದಲು ಪರಿಹಾರ ಕೊಡಿ ಬಿವೈವಿ ವ್ಯಂಗ್ಯ



**ಬೆಂಗಳೂರು,ಅ.1–**ತೊಗರಿ ಬೆಳೆ ಹಾಳಾಗಿದೆ ಎಂದು ಹೇಳಿರುವ ಎ ಐ ಸಿ ಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಕುಟುಂಬಕ್ಕೆ ಮೊದಲು ಪರಿಹಾರ ಕೊಟ್ಟು ಜೊತೆಗೇ ಸಂಕಷ್ಟದಲ್ಲಿರುವ ರೈತರಿಗೆ ಸ್ಪಂದಿಸಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ ವಿಜಯೇಂದ್ರ ಮಾರ್ಮಿಕವಾಗಿ ಹೇಳಿದರು

ಕಲ್ಬುರ್ಗಿಯಲ್ಲಿ ಸುದ್ದಿಗಾರರೊಂದಿಗೆ ರೈತರೊಬ್ಬರು ಬೆಳೆ ನಾಶವಾಗಿದೆ. ತೊಗರಿ ಬೆಳೆ ನಾಶವಾಗಿದೆ. 4 ಎಕರೆಗೆ ಪರಿಹಾರ ಕೊಡಿಸಿ ಎಂದು ಕೇಳಿದರೆ, ನನ್ನದೇ 40 ಎಕರೆ ಬೆಳೆಯೂ ಸಂಪೂರ್ಣ ನಾಶವಾಗಿದೆ. ಪರಿಹಾರ ಬಂದಿಲ್ಲ ಎಂಬ ಮಾತು ಮಲ್ಲಿಕಾರ್ಜುನ ಖರ್ಗೆ ಅವರಿಂದ ಬಂದಿರುವುದು ಸರಿಯಲ್ಲ ಅವರಿಗೆ ಪರಿಹಾರ ಕೊಟ್ಟು ನಂತರ ರೈತರಿಗೆ ಕೊಡಲಿ ಎಂದು ವ್ಯಂಗ್ಯವಾಗಿ ಹೇಳಿದರು

ಒಣಭೂಮಿಗೆ ಎನ್‌ಡಿಆರ್‌ಎಫ್ ನಿಯಮದಡಿ ಹೆಕ್ಟೇರ್‌ಗೆ 6 ಸಾವಿರ ರೂ. ಪರಿಹಾರ ಇತ್ತು. ಆದರೆ, ಮುಖ್ಯಮಂತ್ರಿಗಳಾಗಿದ್ದ ರೈತನಾಯಕ ಯಡಿಯೂರಪ್ಪ ಅವರು ಎಲ್ಲ ಜಿಲ್ಲೆಗಳಿಗೆ ಪ್ರವಾಸ ಮಾಡಿ ಪ್ರವಾಹಪೀಡಿತರಿಗೆ ರಾಜ್ಯದಿಂದ ತನ್ನದೇ ಮಾದರಿಯ ನೆರವು ನೀಡಿದ್ದರು. ಸಿದ್ದರಾಮಯ್ಯನವರಿಗೆ ರೈತರ ಬಗ್ಗೆ ಕಾಳಜಿ ಇಲ್ಲ ಎಂದು ಆರೋಪ ಮಾಡುತ್ತಿಲ್ಲ; ಆ ಕಾಳಜಿ ವ್ಯಕ್ತವಾಗಲಿ ಎಂದು ಪ್ರಶ್ನೆ ಎಂದಿಗೂ ಉತ್ತರಿಸುತ್ತಾ ಹೇಳಿದರು ಸಂದಿಗ್ಧ ಪರಿಸ್ಥಿತಿಯಲ್ಲಿರುವ ರೈತರ ಬಗ್ಗೆ ಈಗ ನೀವು ಕಾಳಜಿ ತೋರಿಸದೇ ಇದ್ದರೆ ಇನ್ಯಾವಾಗ ಕಾಳಜಿ ತೋರಿಸುತ್ತೀರಿ ಎಂದು ಪ್ರಶ್ನಿಸಿದರು. ಎಕರೆಗೆ 25ರಿಂದ 30 ಸಾವಿರ ರೂ. ಪರಿಹಾರ ಕೊಡಬೇಕೆಂದು ಅವರು ಹೇಳಿದರು

ಹಿಂದೂ ಸಮಾಜ ಒಡೆಯಲು ಸಮೀಕ್ಷೆ

ಜಾತಿ ಸಮೀಕ್ಷೆ ಕುರಿತು ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ ಅವರು, ಮುಖ್ಯಮಂತ್ರಿಗಳು ನಿನ್ನೆ ಬಿಜೆಪಿ ವಿರುದ್ಧ ಹರಿಹಾಯ್ದಿದ್ದಾರೆ. ಕೇಂದ್ರ ಸರಕಾರದ ಜಾತಿ ಸಮೀಕ್ಷೆಯನ್ನೂ ವಿರೋಧಿಸುತ್ತೀರಾ ಎಂದು ಕೇಳಿದ್ದಾರೆ. ಕಾಂತರಾಜು ವರದಿಗೆ 180 ಕೋಟಿ ಖರ್ಚು ಮಾಡಿದ್ದೀರಲ್ಲವೇ ನೀವೇ ಮುಖ್ಯಮಂತ್ರಿ ಇದ್ದರೂ ಅದನ್ನು ಅನುಷ್ಠಾನ ಮಾಡಿಲ್ಲವೇಕೆ ಎಂದು ಪ್ರಶ್ನಿಸಿದರು.

ಇವತ್ತು 500– 600 ಕೋಟಿ ಖರ್ಚು ಮಾಡಿ ಸಮೀಕ್ಷೆ ಮಾಡುವುದನ್ನು ಬಿಜೆಪಿ ವಿರೋಧಿಸಲು ಹೊರಟಿಲ್ಲ. ಸ್ವಾತಂತ್ರ್ಯಾನಂತರದಲ್ಲಿ ಹಿಂದಿನ ಕಾಂಗ್ರೆಸ್, ಯುಪಿಎ ಸರಕಾರವು ಜಾತಿ ಗಣತಿ ಕುರಿತು ಇಂಥ ದಿಟ್ಟ ನಿರ್ಧಾರ ಮಾಡಿರಲಿಲ್ಲ. ಮನಮೋಹನ್ ಸಿಂಗ್ ಅವರ ಸರಕಾರ ತೀರ್ಮಾನ ಮಾಡಿದರೂ ರಾಹುಲ್ ಗಾಂಧಿಯವರು ಅದನ್ನು ವಿರೋಧಿಸಿದ್ದರು ಎಂದು ಗಮನ ಸೆಳೆದರು.

ರಾಜ್ಯ ಸರಕಾರವು ಜಾತಿ ಜನಗಣತಿ ನೆಪದಲ್ಲಿ ಪಗಡೆಯಾಟ ಮಾಡಲು ಹೊರಟಿದೆ. ಹಿಂದೂ ಸಮಾಜ ಒಡೆಯಲು ಹೊರಟಿದ್ದಾರೆ. ಜನಗಣತಿಯನ್ನು ವಿರೋಧಿಸುತ್ತಿಲ್ಲ. ಸಿಎಂ ಇಚ್ಛಾಶಕ್ತಿ ಬಗ್ಗೆ ಗೊಂದಲ ಇದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಜಾತಿ ಜನಗಣತಿ ಮಾಡಲು ಹೊರಟಿದ್ದಾರಾ ಅಥವಾ ಪ್ರಾಮಾಣಿಕವಾಗಿ ಹಿಂದುಳಿದ, ಶೋಷಿತ ಸಮುದಾಯಗಳಿಗೆ ನ್ಯಾಯ ಕೊಡಲೆಂದು ಇದನ್ನು ಮಾಡುತ್ತಿದ್ದಾರಾ? ಎಂದು ಪ್ರಶ್ನಿಸಿ ಅವರಲ್ಲಿ ಪ್ರಾಮಾಣಿಕ ಕಳಕಳಿ ಕಾಣುತ್ತಿಲ್ಲ; ಜನರಲ್ಲೂ ಅನುಮಾನ ಹುಟ್ಟುಹಾಕಿದ್ದಾರೆ ಎಂದು ಆಕ್ಷೇಪಿಸಿದರು. ಶೋಷಿತ– ಹಿಂದುಳಿದ ಸಮುದಾಯಗಳಿಗೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ನ್ಯಾಯ ಕೊಡಬೇಕೆಂಬ ಬದ್ಧತೆ ಬಿಜೆಪಿಗೆ ಸ್ಪಷ್ಟವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗೊಂದಲ ಸೃಷ್ಟಿಸುತ್ತಿದ್ದಾರೆ.

ಹೈಕೋರ್ಟ್ ಏನು ಆದೇಶ ಮಾಡಿದೆ ಯಾಕೆ ಕೆಲಸಕ್ಕೆ ಬಾರದ ಪ್ರಶ್ನೆಗಳನ್ನು ಇಟ್ಟುಕೊಂಡಿದ್ದಾರೆ 60ಕ್ಕೂ ಹೆಚ್ಚು ಪ್ರಶ್ನೆಗಳಿದ್ದು, ಇದರಲ್ಲಿ ಎಲ್ಲವೂ ಕಡ್ಡಾಯವಲ್ಲ ಎಂದು ರಾಜ್ಯ ಹೈಕೋರ್ಟ್ ತಿಳಿಸಿದೆ ಎಂದು ಗಮನ ಸೆಳೆದರು.

ಮಾಜಿ ಉಪ ಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ರೈತ ಮೋರ್ಚಾ ರಾಜ್ಯ ಅಧ್ಯಕ್ಷ ಎ.ಎಸ್. ಪಾಟೀಲ್ ನಡಹಳ್ಳಿ, ಮಾಜಿ ಸಂಸದ ಉಮೇಶ್ ಜಾಧವ್, ಶಾಸಕ ಬಸವರಾಜ ಮತ್ತಿಮೂಡ್, ವಿಧಾನಪರಿಷತ್ ಸದಸ್ಯರಾದ ಬಿ.ಜಿ. ಪಾಟೀಲ್, ಶಶಿಲ್ ನಮೋಶಿ, ಮಾಜಿ ಶಾಸಕರಾದ ಅಮರನಾಥ ಪಾಟೀಲ್, ದತ್ತಾತ್ರೇಯ ಪಾಟೀಲ್ ರೇವೂರ್, ಬಿಜೆಪಿ ಕಲಬುರಗಿ ನಗರ ಜಿಲ್ಲಾಧ್ಯಕ್ಷ ಚಂದ್ರಕಾಂತ್ ಬಿ. ಪಾಟೀಲ್, ಕಲಬುರಗಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ ಹಾಗೂ ಮುಖಂಡರು ಇದ್ದರು.

# ವಿದ್ಯಾರ್ಥಿಗಳು ಸಾಹಿತ್ಯ ಅಭಿರುಚಿ ಬೆಳಸಿಕೊಳ್ಳಲು ಡಾ.ಸಿದ್ಧರಾಮ ಹೊನ್ಕಲ್ ಕರೆ



**ಶಹಾಪುರ,ಅ.1–**ಪ್ರಸ್ತುತ ದಿನಗಳಲ್ಲಿ ವಿದ್ಯಾರ್ಥಿಗಳು ಸಾಹಿತ್ಯ ಅಭಿರುಚಿ ಬೆಳೆಸಿಕೊಳ್ಳಬೇಕಿದೆ. ಜತೆಗೆ ಜೀವನದ ಮೌಲ್ಯ ಅಳವಡಿಸಿಕೊಳ್ಳಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಡಾ.ಸಿದ್ಧರಾಮ ಹೊನ್ಕಲ್ ಕರೆ ನೀಡಿದರು.

ತಾಲೂಕಿನ ದೋರನಹಳ್ಳಿ ಗ್ರಾಮದ ಡಿ.ಡಿ.ಯು ಪಿಯು ಕಾಲೇಜಿನಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಮತ್ತು ದೋರನಹಳ್ಳಿಯ ಮತ್ತು ವಲಯ ಕನ್ನಡ ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ ನಡೆದ ಚಕೋರ ಸಾಹಿತ್ಯ ವೇದಿಕೆಯ ಕಾರ್ಯಕ್ರಮದಲ್ಲಿ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಕಲ್ಯಾಣ ಕರ್ನಾಟಕದ ಕೊಡುಗೆ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಚಕೋರ ಎಂದರೆ ಬೆಳದಿಂಗಳಿಗಾಗಿ ಕಾಯುವ ಕಾಲ್ಪನಿಕ ಪಕ್ಷಿ. ಬೆಳದಿಂಗಳ ತಂಪು ಹೊತ್ತಿನಲ್ಲಿ ಕನ್ನಡ ಸಾಹಿತ್ಯವನ್ನು ಎದೆಗೆ ಇಳಿಸಿಕೊಳ್ಳುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣದ ಶಿಲ್ಪಿಗಳನ್ನಾಗಿ ವಿದ್ಯಾರ್ಥಿಗಳನ್ನು ರೂಪಿಸಬೇಕೆನ್ನುವ ಹಂಬಲ ಚಕೋರ ಕಾರ್ಯಕ್ರಮಕ್ಕಿದೆ. ಸಾಹಿತ್ಯದ ಗುಣವೇ ಕ್ರೂರತ್ವವನ್ನು ಕಳೆದು ಮನುಷ್ಯತ್ವದ ಜೀವಸೆಲೆಯನ್ನು ಎದೆಗಿಳಿಸಲಿದೆ. ಇಂದಿನ ಯುವ ತಲೆಮಾರು ಮೊಬೈಲ್ ನೋಡುವ ಸಂಸ್ಕೃತಿಗೆ ವಿದಾಯ ಹೇಳಿ ಪುಸ್ತಕ ಓದುವ ಸಂಸ್ಕೃತಿ ಬೆಳೆಸಿಕೊಳ್ಳಬೇಕೆಂದು ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಶಹಾಪುರ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಸುರೇಶ ಅರುಣಿ ವಿಶೇಷ ಉಪನ್ಯಾಸ ನೀಡಿದರು.ಅವರು ಶೈಕ್ಷಣಿಕ ಅಭಿವೃದ್ಧಿಯಲ್ಲಿ ಕಲ್ಯಾಣ ಕರ್ನಾಟಕದ ಕೊಡುಗೆ ಅಪರವಾಗಿದೆ.ಈ ಭಾಗದ ಗ್ರಾಮೀಣ ಮಕ್ಕಳಿಗೆ ಸರಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳ ಮೂಲಕ ಉತ್ತಮ ಶಿಕ್ಷಣ ನಿಡುತ್ತಿದೆ.ಆದರೆ ಕಲ್ಯಾಣ ಕರ್ನಾಟಕದ ಓದಿದ ವಿದ್ಯಾವಂತ ಯುವಕರಿಗೆ ಸರಕಾರ ಸರಿಯಾದ ಸಮಯಕ್ಕೆ ಉದ್ಯೋಗಳಿಗೆ ನೇಮಕಾತಿ ಮಾಡುತ್ತಿಲ್ಲವೆಂದು ಕಳವಳ ವ್ಯಕ್ತಪಡಿಸಿದರು.

ಗೋಗಿಯ ಸರಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಕಾಮಣ್ಣ ಜೆ.ಕೆ ಸ್ಪರ್ಧಾಜಗತ್ತು ಅವಕಾಶಗಳು ಮತ್ತು ಸವಾಲುಗಳು ಕುರಿತು ವಿಶೇಷ ಉಪನ್ಯಾಸ ನೀಡಿ 'ಈಗ ಪ್ರತಿ ಕ್ಷೇತ್ರದಲ್ಲೂ ಸ್ಪರ್ಧೆ ಹೆಚ್ಚಿದೆ. ಸ್ಪರ್ಧಾತ್ಮಕಯುಗದಲ್ಲಿ ಯಶಸ್ಸು ಗಳಿಸಲು ಜ್ಞಾನ ಸಂಪಾದನೆ ಮುಖ್ಯ.ಶಿಸ್ತುಬದ್ಧ ಜೀವನದಿಂದ ಯಶಸ್ಸು ಸಾಧಿಸಬಹುದು. ಉತ್ತಮ ವ್ಯಕ್ತಿಯಾಗಿ ಗುರುತಿಸಿಕೊಂಡರೆ ಗುರಿ ಸಾಧನೆಗೆ ಸಹಕಾರಿಯಾಗುತ್ತದೆ. ಸಮಯಪಾಲನೆ ಮಾಡದವರು ಗುರಿ ಸಾಧಿಸಲು ಸಾಧ್ಯವಾಗುವುದಿಲ್ಲ. ಪೋಷಕರು ಮಕ್ಕಳ ಕಡೆ ಗಮನಹರಿಸಿ ಸರಿ ದಾರಿಗೆ ತರಬೇಕು' ಎಂದು ಕಿವಿಮಾತು ಹೇಳಿದರು.

ಉಪಸ್ಥಿತಿ ಹೊಂದಿದ್ದು ಗುರುಮಿಠಕಲ್ ಸರಕಾರಿ ಕೈಗಾರಿಕ ತರಬೇತಿ ಕಾಲೇಜಿನ ಉಪನ್ಯಾಸಕ ಯಮನಪ್ಪ ಮುಕಡೇರ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಅನಗತ್ಯ ಚಟುವಟಿಕೆಗಳಲ್ಲಿ ಹೆಚ್ಚು ತೊಡಗಿಸಿಕೊಳ್ಳುತ್ತಿದ್ದಾರೆ. ಪುಸ್ತಕಕ್ಕಿಂತ ಮೊಬೈಲ್ ಬಳಕೆಯಲ್ಲಿ ಹೆಚ್ಚು ತಲ್ಲೀನರಾಗಿರುತ್ತಾರೆ. ಮೊಬೈಲ್ ಬಳಕೆ ಗೀಳಿನಿಂದ ಮಕ್ಕಳು ಕಲಿಕೆ ಕಡೆ ಆಸಕ್ತಿ ತೋರುತ್ತಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು' ಎಂದು ಸಲಹೆ ನೀಡಿದರು.

ಶಹಾಪುರ ತಾಲೂಕ ಕನ್ನಡ ಜಾಗೃತಿ ಸಮಿತಿಯ ಸದಸ್ಯರಾಗಿ ನೇಮಕಗೊಂಡ ಬಸವರಾಜ ಶಿನ್ನೂರು , ದೋರನಹಳ್ಳಿ ವಲಯ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಹೇಶ.ಕೆ.ಪತ್ತಾರ ವಲಯ ಕನ್ನಡ ಸಾಹಿತ್ಯ ಪರಿಷತ್ತಿನ ಗಣಪತಿ ನಾಲವಾರ,ಮಲ್ಲಿಕಾರ್ಜುನ ಹಡಪದ,ಶಿಕ್ಷಕಿ ಸಕ್ಕುಬಾಯಿ ಮಾತನಾಡಿದರು. ಈಸಂದರ್ಭದಲ್ಲಿ ಶಹಾಪುರ ತಾಲೂಕಿನ ಕನ್ನಡ ಜಾಗೃತಿ ಸಮಿತಿ ಸದಸ್ಯ ಬಸವರಾಜ ಶಿನ್ನೂರು ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಡಿ.ಡಿ.ಯು ಪಿಯು ಕಾಲೇಜಿನ ವಿದ್ಯಾರ್ಥಿಗಳು ಕನ್ನಡ ಗೀತೆಗಳು ಹಾಡಿದರು. ಕು.ಚೇತನ್ ಬೇವಿನಹಳ್ಳಿ,ಮೈತ್ರಾ ಬಲಕಲ್ ವಚನ ವಾಚನ ಮಾಡಿದರು. ಭಾರತಿ ಇಬ್ರಾಂಹಿಪುರ ಸ್ವಾಗತಿಸಿದರು.ಸ್ವಾತಿ ಮತ್ತು ನಿರ್ಮಲಾ ಪ್ರಾರ್ಥಿಸಿದರು.ಸಂದೀಪ್ ಅಣಬಿ ವಂದಿಸಿದರು.ಮರಲಿಂಗಪ್ಪ ದಾಳಿ ನಿರೂಪಿಸಿದರು. ಸಿದ್ದಾರೂಢ ಮೇಲಗಿರಿ ನಿರ್ವಹಣೆ ಮಾಡಿದರು

# ವೈದ್ಯಕೀಯ ಕ್ಷೇತ್ರದಲ್ಲಿ ಫಾರ್ಮಸಿಸ್ಟ್ ಸೇವೆ ಅನನ್ಯ : ಕವಿತಾ.ಎಸ್.ಮನ್ನಿಕೇರಿ




**ಹೊಸಪೇಟೆ, ಅ.1–** ಆರೋಗ್ಯ ಹಿತದೃಷ್ಟಿಯಿಂದ ರೋಗಿಗಳಿಗೆ ವೈದ್ಯರು ಶಿಫಾರಸ್ಸು ನೀಡಿದ ಔಷಧಗಳನ್ನು ನಿಖರವಾಗಿ ನೀಡುವ ಮೂಲಕ ಆರೋಗ್ಯ ಸೇವೆಯಲ್ಲಿ ಪ್ರಮುಖ ಪಾತ್ರ ವಹಿಸುವ ಫಾರ್ಮಸಿಸ್ಟ್‌ಗಳ ಸೇವೆಯು ಅನನ್ಯವಾದದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಹೇಳಿದರು.

ನಗರದ ಶ್ರೀವಡಕರಾಯ ದೇವಸ್ಥಾನದ ಬಳಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಫಾರ್ಮಸಿಸ್ಟ್ ದಿನಾಚರಣೆಯ ಜಾಗೃತಿ ಜಾಥಾವನ್ನು ಚಾಲನೆ ನೀಡಿ ಅವರು ಮಂಗಳವಾರ ಮಾತನಾಡಿದರು, ಔಷಧ ಸಂಶೋಧನೆ, ತಯಾರಿಕೆ, ವಿತರಣೆ ಸೇರಿ ಎಲ್ಲ ಹಂತಗಳಲ್ಲೂ ಔಷಧಿ ತಜ್ಞರು ಶ್ರಮಿಸುತ್ತಿದ್ದಾರೆ. ವೈದ್ಯರಷ್ಟೇ ಮುಖ್ಯ ಪಾತ್ರವನ್ನು ಔಷಧಿ ತಜ್ಞರು ನಿರ್ವಹಿಸುತ್ತಿದ್ದಾರೆ. ವಿವಿಧ ರೋಗಗಳ ವಿರುದ್ಧ ಪರಿಣಾಮಕಾರಿ ಔಷಧ ಕಂಡುಹಿಡಿದು ಔಷಧಿ ತಜ್ಞರು ರೋಗಿಗಳ ಜೀವಿತಾವಧಿಯನ್ನು ಹೆಚ್ಚಿಸುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ತಜ್ಞ ವೈದ್ಯ ವಿಜ್ಞಾನಿಗಳ ಸಲಹೆ ಮತ್ತು ನಿರ್ದೇಶನ ಫಾರ್ಮಸಿಸ್ಟ್‌ಗಳಿಗೆ ಸಹಕಾರಿಯಾಗಿದೆ. ದಿನಾಚರಣೆಯು ಔಷಧ ವಿಜ್ಞಾನ ಕ್ಷೇತ್ರದಲ್ಲಿ ಜಾಗತಿಕವಾದ ಜ್ಞಾನ ವಿನಿಮಯ, ಸಂಘಟನೆ, ಜನಪರ ಕಾಳಜಿ ಮತ್ತು ಗುಣಮಟ್ಟ ಔಷಧಿಗಳನ್ನು ಕಾಯ್ದುಕೊಳ್ಳುವಂತಹ ವಿವಿಧ ಉದ್ದೇಶಗಳನ್ನು ಹೊಂದಿದೆ ಎಂದರು.

ಜಾಗೃತಿ ಜಾಥಾವು ನಗರದ ಶ್ರೀವಡಕರಾಯ ದೇವಸ್ಥಾನ ಆರಂಭಗೊಂಡು ಮೇನ್ ಬಜಾರ್, ಗಾಂಧಿ ವೃತ್ತ, ಬಸ್ ನಿಲ್ದಾಣ ಮಾರ್ಗವಾಗಿ ಡಾ.ಪುನೀತ್ ರಾಜ್‌ಕುಮಾರ್ ವೃತ್ತದ ವರೆಗೆ ವಿವಿಧ ಘೋಷಣೆಗಳನ್ನು ಕುಗುತ್ತಾ ಜನಜಾಗೃತಿ ಮೂಡಿಸಲಾಯಿತು.

ಈ ವೇಳೆ ತಾಲೂಕು ವೈದ್ಯಾಧಿಕಾರಿ ಡಾ.ವಿನೋದ್, ಔಷಧಿ ವ್ಯಾಪಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಎಂ.ಬಸವರಾಜ ರೆಡ್ಡಿ, ಜಿಲ್ಲಾ ಘಟಕದ ಅಧ್ಯಕ್ಷ ಜೆ.ಸಂತೋಷ್ ಕುಮಾರ್, ಜಿಲ್ಲಾ ಕಾರ್ಯದರ್ಶಿ ವಾಹಿದ್ ತಂಬ್ರಹಳ್ಳಿ, ಜಿಲ್ಲಾ ಘಟಕದ ಪದಾಧಿಕಾರಿಗಳಾದ ರಾಜಶೇಖರ್ ಸ್ವಾಮಿ, ಮಲ್ಲಿಕಾರ್ಜುನ ಕೊತ್ತೂರು, ಚಿದಾನಂದ ಸ್ವಾಮಿ, ಪ್ರಶಾಂತ್ ಪೂಜಾರ್, ಮಂಜುನಾಥ, ನಾಗೇಶ್ ಸೇರಿದಂತೆ ಹೊಸಪೇಟೆ ತಾಲೂಕು ಘಟಕದ ಅಧ್ಯಕ್ಷ ಸತೀಶ್ ವೇಮಲ್, ಉಪಾಧ್ಯಕ್ಷರಾದ ಪಿ.ಸುಬ್ರಮಣ್ಯ, ಪದಾಧಿಕಾರಿಗಳಾದ ಜಾವೇದ್ ಮಹಮ್ಮದ್, ಪ್ರಕಾಶ್ ಜಾಲಿ, ಪ್ರಶಾಂತ್, ಕಿರಣ್ ಕಲಾಲ್ ಭಾಗವಹಿಸಿದ್ದರು.

# ಗರ್ಭಿಣಿ ಮಹಿಳೆಯರು, ತಾಯಂದಿರು ಆರೋಗ್ಯದ ಕಾಳಜಿ ವಹಿಸಲು ಸೂಚನೆ



**ಬಳ್ಳಾರಿ, ಅ.1–** ಗರ್ಭಿಣಿ ಮಹಿಳೆಯರು, ತಾಯಂದಿರು ತಮ್ಮ ಆರೋಗ್ಯದ ಕಡೆಗೆ ಹೆಚ್ಚು ಕಾಳಜಿ ವಹಿಸಬೇಕು. ಗರ್ಭಾವಸ್ಥೆಯಲ್ಲಿ ರಕ್ತಹೀನತೆ ತಡೆಗಟ್ಟಲು ಪೌಷ್ಟಿಕ ಆಹಾರ ಮತ್ತು ಕಬ್ಬಿಣಾಂಶದ ಮಾತ್ರೆ ನಿಯಮಿತವಾಗಿ ಸೇವಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರದಲ್ಲಿ "ಸ್ವಸ್ಥನಾರಿ ಸಶಕ್ತ ಪರಿವಾರ ಅಭಿಯಾನ" ಮತ್ತು ಎಂಟನೇ ಪೋಶನ್ ಮಾಸಾಚರಣೆ ಅಂಗವಾಗಿ ಬಳ್ಳಾರಿ ತಾಲ್ಲೂಕಿನ ಮೋಕ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಆಯೋಜಿಸಿದ್ದ ಪೋಷಣ್ ಮಾಸಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗರ್ಭಿಣಿ ಮಹಿಳೆಯರು, ತಾಯಂದಿರು ವೈದ್ಯರ ಹತ್ತಿರ ನಿಯಮಿತ ಆರೋಗ್ಯ ತಪಾಸಣೆ ಮತ್ತು ಮಕ್ಕಳಿಗೆ ನಿಗಧಿತ ವೇಳೆಯಲ್ಲಿ ಲಸಿಕೆ ಹಾಕಿಸಬೇಕು. ಹದಿಹರೆಯದ ಹೆಣ್ಣುಮಕ್ಕಳು ಸಕಾಲದಲ್ಲಿ ರಕ್ತ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ವಿನಂತಿಸಿದರು.

ತಾಯಂದಿರು ಮಕ್ಕಳಿಗೆ 6 ತಿಂಗಳ ನಂತರ ತಾಯಿಯ ಎದೆ ಹಾಲಿನ ಜೊತೆಗೆ ಪೂರಕ ಆಹಾರ ಪ್ರಾರಂಭಿಸಬೇಕು. ಇಲ್ಲವಾದಲ್ಲಿ ಮಕ್ಕಳು ಅಪೌಷ್ಟಿಕತೆಗೆ ಗುರಿಯಾಗಿ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ ಎಂದು ಡಿಹೆಚ್‌ಓ ಅವರು ಕಿವಿಮಾತು ಹೇಳಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಮಹಿಳೆಯರ ಮತ್ತು ಮಕ್ಕಳ ನಿರ್ದಿಷ್ಟ ಆರೋಗ್ಯ, ಪೌಷ್ಟಿಕಾಂಶದ ಅಗತ್ಯತೆ ಪೂರೈಸಲು ಆಯುಷ್ಮಾನ್ ಆರೋಗ್ಯ ಮಂದಿರಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಆರೋಗ್ಯ ಶಿಬಿರ ಆಯೋಜಿಸಲಾಗುತ್ತಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಶಾಕಾರ್ಯಕರ್ತೆಯರಿಗೆ ಪ್ರತಿ ತಿಂಗಳು 3ನೇ ಶನಿವಾರ ನಡೆಯುವ ಗ್ರಾಮ ಆರೋಗ್ಯ ಪೌಷ್ಟಿಕ ದಿನಾಚರಣೆಯಲ್ಲಿ ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಸಿಗುವ ತರಕಾರಿಗಳಿಂದ ತಯಾರಿಸಬಹುದಾದ ಪೌಷ್ಟಿಕ ಆಹಾರದ ಕುರಿತು ಪ್ರಾತ್ಯಕ್ಷಿತೆ ಮಾಡಿ ತಾಯಂದಿರಿಗೆ ತಿಳಿಸಲು ಸೂಚಿಸಿದರು. ಆಶಾಕಾರ್ಯಕರ್ತೆಯರು ಪೋಷಣ್ ಮಾಸಾಚರಣೆ ನಿಮಿತ್ತ ವಿವಿಧ ರೀತಿಯ ತಯಾರಿಸಿದ ಪೌಷ್ಠಿಕ ಆಹಾರಗಳನ್ನು ತಾಯಂ ದಿರಿಗೆ ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಮೋಕ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಭಾರತಿ, ಪ್ರಸೂತಿ ತಜ್ಞ ವೈದ್ಯೆ ಡಾ.ವಿಜಯಲಕ್ಷ್ಮಿ , ಎನ್.ಸಿ.ಡಿ ವೈದ್ಯೆ ಡಾ. ಸಿಂಧು, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಕಚೇರಿ ಅಧೀಕ್ಷಕ ವೆಂಕಟಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಸವರಾಜ.ವಿ ಸೇರಿದಂತೆ ವಿವಿಧ ವೃಂದ ಅಧಿಕಾರಿ ಸಿಬ್ಬಂದಿ ವರ್ಗದವರು, ಆಶಾಕಾರ್ಯಕರ್ತೆಯರು, ತಾಯಂದಿರು ಉಪಸ್ಥಿತರಿದ್ದರು.

# 38.74 ಲಕ್ಷ ರೂ.ಮೌಲ್ಯದ ಮಾದಕ ವಸ್ತು ನಾಶ

**ಕಲಬುರಗಿ,ಅ.1–**ನಗರದ ವಿವಿಧ ಪೊಲೀಸ್ ಠಾಣೆಗಳಲ್ಲಿ ಎಡಿಪಿಎಸ್ ಕಾಯ್ದೆ ಅಡಿಯಲ್ಲಿ ದಾಖಲಾದ ಒಟ್ಟು 15 ಪ್ರಕರಣಗಳಲ್ಲಿ ವಶಪಡಿಸಿಕೊಂಡ 11,63, 582 ರೂ.ಮೌಲ್ಯದ 19 ಕೆಜಿ 18 ಗ್ರಾಂ. ಗಾಂಜಾ ಹಾಗೂ 27,11,264 ರೂ.ಮೌಲ್ಯದ 778 ಕೆಜಿ ಸಿಂಥೆಟಿಕ್ ಡ್ರಗ್, ಟ್ಯಾಬ್ಲೆಟ್ಸ್ /ಸಿರಪ್ ಸೇರಿ ಒಟ್ಟು 38,74,846 ರೂ. ಮೌಲ್ಯದ ಮಾದಕ ವಸ್ತುಗಳನ್ನು ಪರಿಸರ ಅಧಿಕಾರಿಗಳು ಹಾಗೂ ಜಿಲ್ಲೆಯ ಮಾದಕ ವಸ್ತುಗಳ ವಿಲೇವಾರಿ ಕಮಿಟಿ ಅಧ್ಯಕ್ಷರು ಹಾಗೂ ಸದಸ್ಯರ ಸಮ್ಮುಖದಲ್ಲಿ ನಾಶಪಡಿಸಲಾಯಿತು.



ಯುವ ಮಾರ್ಗ

ಗುರುವಾರ: 02–10–2025

## ಕಸಾಪದಲ್ಲಿ ಭ್ರಷ್ಟಾಚಾರ ಆರೋಪ : ಸೂಪರ್ ಸೀಡ್‌ಗೆ ಸರ್ಕಾರ ನಿರ್ಧಾರ..?




**ಬೆಂಗಳೂರು,ಅ.1–**ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ ನಲ್ಲಿ ಸಾಕಷ್ಟು ಭ್ರಷ್ಟಚಾರದ ಆರೋಪಗಳು ಕೇಳಿ ಬಂದ ಹಿನ್ನಲೆಯಲ್ಲಿ ಇದನ್ನು ಸೂಪರ್ ಸೀಡ್ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ.ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ ಅವರ ಅವಧಿಯಲ್ಲಿ ಹಣಕಾಸು ಅವ್ಯವಹಾರ ಮತ್ತು ಭ್ರಷ್ಟಾಚಾರದ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ತನಿಖೆಗೆ ಆದೇಶಿಸಿದೆ. ಡಿಸೆಂಬರ್‌ನಲ್ಲಿ ನಡೆಯಲಿರುವ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮೆಳನಕ್ಕಿಂತ ಮುನ್ನ ಈ ತನಿಖೆ ನಡೆಯಲಿದ್ದು, ಸಹಕಾರ ಇಲಾಖೆಯ ಜಂಟಿ ನಿಬಂಧಕರು ಹಣಕಾಸು ವ್ಯವಹಾರಗಳನ್ನು ಪರಿಶೀಲಿಸಲಿದ್ದಾರೆ.

ಉಪ ನಿಯಮಗಳ ತಿದ್ದುಪಡಿ, ಪದಾಧಿಕಾರಿಗಳಿಗೆ ಅಕ್ರಮ ನೋಟಿಸ್ ಜಾರಿ, ಸರ್ಕಾರಿ ಅನುದಾನ ಹಾಗೂ ಇತರ ಅನುದಾನಗಳ ದುರ್ಬಳಕೆ,ವಾಹನ ಖರೀದಿ ಮತ್ತು ಮಾರಾಟದಲ್ಲಿ ಅವ್ಯವಹಾರ,ಸಿಸಿಟಿವಿ ಅಳವಡಿಕೆ ಮತ್ತು ಅಗ್ನಿಶಾಮಕ ಯಂತ್ರಗಳ ಖರೀದಿಯಲ್ಲಿ ಲೋಪಗಳು, ಅಧ್ಯಕ್ಷರ ಕುಟುಂಬ ಸದಸ್ಯರಿಗೆ ಸಂಬಂಧಿಸಿದ ಕಾರ್ಯಕ್ರಮಗಳಿಗೆ ಹಣ ದುರುಪಯೋಗ ಸೇರಿದಂತೆ ಕೆಲವು ಗುರುತರವಾದ ಆರೋಪಗಳು ಕೇಳಿ ಬಂದಿವೆ.

ಹೀಗಾಗಿ ಸರ್ಕಾರ ಸಾಹಿತ್ಯ ಪರಿಷತ್ ಅನ್ನು ಸೂಪರ್ ಸೀಡ್ ಮಾಡಿ ದಿನನಿತ್ಯದ ಕಾರ್ಯನಿರ್ವಾಹಣೆಗೆ ಯಾವುದೇ ರೀತಿಯ ತೊಂದರೆಯಾಗದಂತೆ ಆಡಳಿತಾಧಿಕಾರಿಯನ್ನು ನೇಮಕ ಮಾಡುವ ಸಾಧ್ಯತೆ ಇದೆ. ಒಂದು ವೇಳೆ ಸರ್ಕಾರ ಸೂಪರ್ ಸೀಡ್ ಮಾಡಿದರೆ, ಇತಿಹಾಸದಲ್ಲೇ ಮೊದಲ ಬಾರಿಗೆ ಕನ್ನಡಿಗರ ಆಸಿತಿಯಂತಿರುವ ಸಾಹಿತ್ಯ ಪರಿಷತ್ ಸರ್ಕಾರದ ನಿಯಂತ್ರಣಕ್ಕೆ ಒಳಪಡಲಿದೆ.ಒಂದು ಬಾರಿ ಆಡಳಿತಾಧಿಕಾರಿ ನೇಮಕ ಮಾಡಿದರೆ, ಹಾಲಿ ಇರುವ ಸಮಿತಿಗೆ ಯಾವುದೇ ಅಧಿಕಾರ ಇರುವುದಿಲ್ಲ. ಸಾಹಿತ್ಯ ಪರಿಷತ್ ಸುಧಾರಣೆಯಾಗಬೇಕು ಎಂದು ಕೆಲವು ಸಾಹಿತಿಗಳು ಒತ್ತಾಯಿಸಿದ ಹಿನ್ನಲೆಯಲ್ಲಿ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ.ಈಗಾಗಲೇ ಕೆಲವರು ಮಹೇಶ್ ಜೋಶಿ ಅವರ ಧೋರಣೆಯನ್ನು ಖಂಡಿಸಿ ತಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಸಾಹಿತ್ಯ ಪರಿಷತ್ ನ ಗೌರವ ಕಾರ್ಯದರ್ಶಿ ಪದನಿ ನಾಗರಾಜು ಅವರು ತಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರು.

**ಪ್ರಕರಣವೇನು:** ಬಳ್ಳಾರಿ ಜಿಲ್ಲೆ ಸಂಡೂರಿನಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದ 2023–24ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಪತ್ರಕರ್ತ ಮತ್ತು ಲೇಖಕ ಜಾಣಗೆರೆ ವೆಂಕಟರಾಮಯ್ಯ ಹಾಗೂ ಲೇಖಕಿ ಡಾ.ವಸುಂಧರಾ ಭೂಪತಿ ಸಲ್ಲಿಸಿದ್ದ ದೂರಿನ ಹಿನ್ನೆಲೆಯಲ್ಲಿ ರದ್ದುಪಡಿಸಿ ಸಹಕಾರ ಸಂಘಗಳ ಉಪನಿಬಂಧಕರು 2025ರ ಜೂನ್ 27ರಂದು ಆದೇಶ ಹೊರಡಿಸಿದ್ದರು.

ಕನ್ನಡ ಸಾಹಿತ್ಯ ಪರಿಷತ್ತಿನ 2023–24ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಭೆ ರದ್ದುಪಡಿಸಿ ಹಾಗೂ ಪದಾಧಿಕಾರಿಗಳ ಕಾರ್ಯವೈಖರಿ, ಅನುದಾನ ಮತ್ತು ಖರ್ಚು–ವೆಚ್ಚಗಳ ಕುರಿತು ವಿಚಾರಣೆ ನಡೆಸಲು ತನಿಖಾಧಿಕಾರಿ ನೇಮಕ ಮಾಡಿ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ನೋಂದಣಾಧಿಕಾರಿ 2ನೇ ವಲಯ ಬೆಂಗಳೂರು ನಗರ ಜಿಲ್ಲಾ ಇವರು 2025ರ ಜೂನ್ 26 ಹಾಗೂ 30ರಂದು ಹೊರಡಿಸಿರುವ ಆದೇಶಗಳನ್ನು ರದ್ದುಪಡಿಸಬೇಕು ಎಂದು ಕೋರಿದ್ದರು.ಎನ್.ಹನುಮೇಗೌಡ ಹಾಗೂ ಇತರರು ನೀಡಿದ ದೂರಿನ ಹಿನ್ನೆಲೆಯಲ್ಲಿ, 2023–24ರಿಂದ ಇಲ್ಲಿವರೆಗೆ ಪರಿಷತ್ತು ಅನುಮೋದಿಸಿರುವ ತಿದ್ದುಪಡಿಗಳು, ಆಡಳಿತ ಮಂಡಳಿ ಪದಾಧಿಕಾರಿಗಳಿಗೆ ಪರಿಷತ್ತಿನ ಅಧ್ಯಕ್ಷರು ನಿಯಮಬಾಹಿರವಾಗಿ ನೀಡಿರುವ ನೋಟಿಸ್‌ಗಳು, 2023–24ನೇ ಸಾಲಿನಲ್ಲಿ ಪರಿಷತ್ತಿಗೆ ಸಂಗ್ರಹವಾಗಿರುವ ಆದಾಯವನ್ನು ದುರುಪಯೋಗ ಪಡಿಸಿಕೊಂಡಿರುವುದು, ಈ ಅವಧಿಯಲ್ಲಿನ ಖರೀದಿ ಮತ್ತು ಮಾರಾಟದಲ್ಲಿ ಆಗಿರುವ ಅವ್ಯವಹಾರ ಮತ್ತಿತ್ತರ ವಿಷಯಗಳನ್ನು ಪರಿಶೀಲಿಸಿ, ಸೂಕ್ತ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯನ್ನು ನೇಮಕ ಮಾಡಿ, ಜೂನ್ 30ರಂದು ಆದೇಶ ಹೊರಡಿಸಲಾಗಿತ್ತು. ಈ ಆದೇಶಗಳನ್ನು ರದ್ದುಪಡಿಸಬೇಕು ಎಂದು ಮಹೇಶ್ ಜೋಶಿ ಅರ್ಜಿ ಸಲ್ಲಿಸಿದ್ದರು.

**ಬೈಲಾ ತಿದ್ದುಪಡಿಗೆ ವಿರೋಧ:** ಕನ್ನಡ ಸಾಹಿತ್ಯ ಪರಿಷತ್‌ನ ಆಡಳಿತ, ಪ್ರತಿನಿತ್ಯದ ಕಾರ್ಯಚಟುವಟಿಕೆ, ಸಾಹಿತ್ಯ ಸಮೆಳನ ಪರಿಣಾಮಕಾರಿ ಯಾಗಿ ನಡೆಯುವ ಉದ್ದೇಶದಿಂದ ಬೈಲಾದಲ್ಲಿ ತಿದ್ದುಪಡಿ ತರಲು ಪರಿಷತ್ತು ಉದ್ದೇಶಿಸಿತ್ತು. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಎ.ಎಸ್. ಪಾಚ್ಚಾಪುರೆ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯ ಜರಸ್ಸಿನ ಅನುಸಾರ ಈಗ ಬೈಲಾ ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ.ಇದಕ್ಕೆ ಕೆಲವರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಮೂರನೇ ಬಾರಿಗೆ ಬೈಲಾ ತಿದ್ದುಪಡಿ ತರುತ್ತಿದ್ದು, ಸಾಹಿತ್ಯ ಸಮೆಳನ ಸುಸೂತ್ರವಾಗಿ ನಡೆಯಲು ಪರಿಷತ್ತಿನ ರಾಜ್ಯ ಘಟಕದ ಅಧ್ಯಕ್ಷರು ತಾವೇ ನೇರವಾಗಿ ಅಥವಾ ಮಾರ್ಗಸೂಚಿ ಉಪಸಮಿತಿಯನ್ನು ರಚಿಸಿ, ಮಾರ್ಗಸೂಚಿಗಳನ್ನು ಹೊರಡಿಸಬಹುದಾಗಿದೆ. ಹೀಗೆ ರಚಿಸಿದ ಮಾರ್ಗಸೂಚಿಗಳನ್ನು ಸಮೆಳನ ನಡೆಯುವ ಜಿಲ್ಲೆಯ ಜಿಲ್ಲಾಡಳಿತ ಮತ್ತು ಸರ್ಕಾರದ ವಿವಿಧ ಇಲಾಖೆಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ತಿದ್ದುಪಡಿಯಲ್ಲಿ ಪ್ರಸ್ತಾಪಿಸಲಾಗಿದೆ.ಈ ಹಿಂದೆ 2022ರಲ್ಲಿ ಪರಿಷತ್ತಿನ ಬೈಲಾದಲ್ಲಿ ಆಮೂಲಾಗ್ರ ಬದಲಾವಣೆ ತರಲಾಗಿತ್ತು. 2023ರಲ್ಲಿ ಎರಡನೇ ಬಾರಿ ತಿದ್ದುಪಡಿ ಮಾಡಲಾಗಿತ್ತು.

## ಬಿಜೆಪಿಯ ಆತ್ಮವಂಚನೆಯ ಪ್ರತಿಭಟನೆಗಳು ಕಲಬುರಗಿಗೆ ಅಗತ್ಯವಿಲ್ಲ– ಸಚಿವ ಪ್ರಿಯಾಂಕ್ ಖರ್ಗೆ

ಅಧಿಕಾರದಲ್ಲಿದ್ದಾಗ ಕಲಬುರಗಿ ಜಿಲ್ಲೆಯ ರೈತರಿಗೆ ದ್ರೋಹವೆಸಗಿದ್ದ ಬಿಜೆಪಿ ಈಗ ಪ್ರತಿಭಟನೆಯ ನಾಟಕ ನಡೆಸುವುದು ಹಾಸ್ಯಸ್ಪದವಾಗಿದೆ. ಬಿಜೆಪಿಯ ಈ ಆತ್ಮವಂಚನೆಯ ಪ್ರತಿಭಟನೆಗಳು ಅಗತ್ಯವಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹರಿಹಾಯ್ದಿದ್ದಾರೆ.

ತಮ್ಮ " ಎಕ್ಸ್ " ಖಾತೆಯಲ್ಲಿ ಈ ಬಗ್ಗೆ ಅಂಕಿ ಅಂಶಗಳ ಸಮೇತ ಸುದೀರ್ಘವಾಗಿ ಬರೆದುಕೊಂಡಿರುವ ಅವರು ಬಿಜೆಪಿ ಆಡಳಿತವಧಿಯಲ್ಲಿ ಕಲಬುರಗಿ ಜಿಲ್ಲೆಗೆ ಒಂದು ಮಂತ್ರಿ ಸ್ಥಾನವನ್ನು ಕೊಟ್ಟಿರಲಿಲ್ಲ, ಆಗ ಇದ್ದಂತಹ ಉಸ್ತುವಾರಿ ಮಂತ್ರಿಗಳು ಜಿಲ್ಲೆಯ ಕಡೆ ತಲೆ ಹಾಕುತ್ತಿರಲಿಲ್ಲ, ಇಂತಹ ಬಿಜೆಪಿಗೆ ಇಂದು ನಮ್ಮ ಕಡೆ ಬೆರಳು ತೋರಿಸುವುದಕ್ಕೆ ಕನಿಷ್ಠ ಮಟ್ಟದ ನೈತಿಕತೆ ಇಲ್ಲ ಎಂದು ಟೀಕಿಸಿದ್ದಾರೆ.

ಕಲಬುರಗಿಯ ಜನರ ಸಂಕಷ್ಟಕ್ಕೆ ಬಿಜೆಪಿ ಸರ್ಕಾರ ಹೇಗೆ ನಡೆದುಕೊಂಡಿತ್ತು ಎಂಬುದರ ಬಗ್ಗೆ ಅಂಕಿ ಅಂಶಗಳೇ ಮಾತನಾಡುತ್ತವೆ. ಜಿಲ್ಲೆಯ ರೈತರಿಗೆ ಯಾವ ಸರ್ಕಾರ ಎಷ್ಟು ಅನುಕೂಲ ಮಾಡಿಕೊಟ್ಟಿದೆ ಎನ್ನುವುದನ್ನು ನಾವು ಹೇಳುವುದು ಬೇಕಿಲ್ಲ, ಅಂಕಿ ಅಂಶಗಳೇ ಹೇಳುತ್ತವೆ. ಬಿಜೆಪಿ ಸರ್ಕಾರದ ಅವಧಿಯ ನಾಲ್ಕು ವರ್ಷಗಳಲ್ಲಿ ನೆರೆ, ಬರದ ವಿಷಯದಲ್ಲಿ ಬಿಜೆಪಿ ಪರಿಹಾರ ಒದಗಿಸಿಕೊಟ್ಟಿದ್ದು ನಗಣ್ಯ.

ಬಿಜೆಪಿ ಅವಧಿಯಲ್ಲಿ ರೈತರಿಗೆ ದೊರಕಿದ ಬೆಳೆ ವಿಮೆ ಪರಿಹಾರ

2019 –20ನೇ ಸಾಲಿನಲ್ಲಿ 38,248 ರೈತರಿಗೆ 16.65 ಕೋಟಿ ಪರಿಹಾರ ಮಾತ್ರ.

2020 21ನೇ ಸಾಲಿನಲ್ಲಿ 37,145 ರೈತರಿಗೆ ಕೇವಲ 22.97 ಕೋಟಿ ಪರಿಹಾರ ಮಾತ್ರ.

2021 22ನೇ ಸಾಲಿನಲ್ಲಿ 66,234 ರೈತರಿಗೆ 57.95 ಕೋಟಿ ಪರಿಹಾರ ಮಾತ್ರ.

2022 23ನೇ ಸಾಲಿನಲ್ಲಿ 1,88,600 ರೈತರಿಗೆ ಒದಗಿಸಿದ್ದು 108.6 ಕೋಟಿ ಪರಿಹಾರ ಮಾತ್ರ.

ನಾಲ್ಕು ವರ್ಷದಲ್ಲಿ ಒಟ್ಟು 206.17 ಕೋಟಿ ಪರಿಹಾರ ಮಾತ್ರ ನೀಡಲಾಗಿದೆ.

ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಎರಡೇ ವರ್ಷದಲ್ಲಿ ಅತಿ ಹೆಚ್ಚು ಬೆಳೆ ವಿಮೆ ಪರಿಹಾರ ಒದಗಿಸುವಲ್ಲಿ ಯಶಸ್ವಿಯಾಗಿದೆ.



2023 24ನೇ ಸಾಲಿನಲ್ಲಿ 1,59,622 ರೈತರಿಗೆ ?189.40 ಕೋಟಿ ಪರಿಹಾರ ನೀಡಿದ್ದೇವೆ.

2024–25 ನೇ ಸಾಲಿನಲ್ಲಿ 2,03,746 ರೈತರಿಗೆ ?656.63 ಕೋಟಿ ಪರಿಹಾರ ಒದಗಿಸಿದ್ದೇವೆ.

ಒಟ್ಟು 3,63,368 ರೈತರಿಗೆ 846.03 ಕೋಟಿ ಪರಿಹಾರವನ್ನು ಎರಡೇ ವರ್ಷದಲ್ಲಿ ಒದಗಿಸಿದ್ದೇವೆ.

ತೊಗರಿಯ ನೆಟೆ ರೋಗದ ಬಗ್ಗೆ ಬಿಜೆಪಿ ತಲೆ ಕೆಡಿಸಿಕೊಂಡಿರಲೇ ಇಲ್ಲ, ನಮ್ಮ ಸರ್ಕಾರವು 2023–24ನೇ ಸಾಲಿನಲ್ಲಿ 1,78,354 ರೈತರಿಗೆ 181.86 ಕೋಟಿ ನೆಟೆ ರೋಗದ ಪರಿಹಾರ ಒದಗಿಸಿದೆ.

ಹಾಗೆಯೇ, ಹೆಚ್ಚು ಇನ್ ಪುಟ್ ಸಬ್ಸಿಡಿಯನ್ನು ಒದಗಿಸಿಕೊಡುವ ಮೂಲಕ ರೈತರ ನೆರವಿಗೆ ನಿಂತಿದೆ ನಮ್ಮ ಸರ್ಕಾರ, ಎರಡು ವರ್ಷಗಳಲ್ಲಿ 3,49,555 ರೈತರಿಗೆ ?389.14 ಕೋಟಿ ಸಬ್ಸಿಡಿ ಒದಗಿಸಲಾಗಿದೆ.

ಎರಡೇ ವರ್ಷದ ಅವಧಿಯಲ್ಲಿ ಒಟ್ಟು 8,91,277 ರೈತರು ಫಲಾನುಭವಿಗಳಾಗಿದ್ದಾರೆ, 1,417.02 ಕೋಟಿ ಹಣ ರೈತರ ಕೈ ಸೇರಿದೆ.

ಬಿಜೆಪಿ ಸರ್ಕಾರ ಕಲಬುರಗಿ ರೈತರಿಗೆ ನಾಲ್ಕು ವರ್ಷಗಳಲ್ಲಿ ಕೊಟ್ಟಿರುವ ಮೊತ್ತದ ಏಳು ಪಟ್ಟು ಹೆಚ್ಚು ಹಣವನ್ನು ನಮ್ಮ ಸರ್ಕಾರ ಎರಡೇ ವರ್ಷದಲ್ಲಿ ಒದಗಿಸಿದೆ ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದ್ದಾರೆ.

ಕಲಬುರಗಿಯಲ್ಲಿ ಈಗಾಗಲೇ ನೆರೆ ಪರಿಸ್ಥಿತಿ ಇದೆ, ಬಿಜೆಪಿಯವರ ನಕಲಿ ಮೊಸಳೆ ಕಣ್ಣೀರಿನಿಂದ ಪ್ರವಾಹ ಹೆಚ್ಚಾಗಬಹುದು, ಹಾಗಾಗಿ ಅವರ ನಕಲಿ ಕಣ್ಣೀರು, ಆತ್ಮವಂಚಕತನದ ಪ್ರತಿಭಟನೆಗಳು ಕಲಬುರಗಿಗೆ ಅಗತ್ಯವಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹರಿಹಾಯ್ದಿದ್ದಾರೆ.

## ಬೆಂಬಲ ಬೆಲೆ ಯೋಜನೆಯಡಿ ಸೂರ್ಯಕಾಂತಿ, ಶೇಂಗಾ ಉತ್ಪನ್ನಗಳ ಖರೀದಿ:ಜಿಲ್ಲಾಧಿಕಾರಿ

**ಬಳ್ಳಾರಿ, ಅ.01–** ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ 2025–26ನೇ ಸಾಲಿಗೆ ಎಫ್.ಎ.ಕ್ಯೂ ಗುಣಮಟ್ಟದ ಮುಂಗಾರು ಹಂಗಾಮಿನ ಸೂರ್ಯಕಾಂತಿ ಮತ್ತು ಶೇಂಗಾ ಉತ್ಪನ್ನವನ್ನು ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಪ್ರಸ್ತಕ ಸಾಲಿಗೆ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹಾಗೂ ಶೇಂಗಾ ಉತ್ಪನ್ನಗಳನ್ನು ಖರೀದಿಸುವ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಂಬಲ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹಾಗೂ ಶೇಂಗಾ ಉತ್ಪನ್ನಗಳನ್ನು ಖರೀದಿಸಲು ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯವುಳ್ಳ ಖರೀದಿ ಕೇಂದ್ರಗಳ ಸ್ಥಾಪನೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸೂರ್ಯಕಾಂತಿ ಮತ್ತು ಶೇಂಗಾ ಉತ್ಪನ್ನ ಖರೀದಿಗಾಗಿ ಬಳ್ಳಾರಿಯ ಎಪಿಎಂಸಿ ಮಾರುಕಟ್ಟೆ ಇದ್ದು, ರೈತರಿಗೆ ಅನುಕೂಲವಾಗುವಂತೆ ಬೇಡಿಕೆ ಇದ್ದಲ್ಲಿ ಸಂಡೂರು ಪಟ್ಟಣದ ಎಪಿಎಂಸಿ ಯಲ್ಲಿ ಖರೀದಿ ಕೇಂದ್ರ ಆರಂಭಿಸಲು ಸಿದ್ಧತೆ ಕೈಗೊಳ್ಳಬೇಕು ಎಂದು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅದೇರೀತಿಯಾಗಿ ರೈತರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ



ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳುವ ಕುರಿತು ಸಹ ಅಗತ್ಯ ಮಾಹಿತಿ ರೈತರಿಗೆ ಒದಗಿಸುವಂತೆಯೂ ಸೂಚಿಸಿದರು.

ರೈತರ ಹೆಸರಿನ ಆಧಾರ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಮಾತ್ರ ಡಿಬಿಟಿ ಮೂಲಕ ಹಣ ಜಮೆ ಆಗಲಿದ್ದು, ರೈತರು ಕಡ್ಡಾಯವಾಗಿ ಎಫ್‌ಐಡಿ ಮತ್ತು ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಕೊಳ್ಳುವಂತೆ ತಿಳಿಸಬೇಕು ಎಂದರು.

ಸಭೆ?ಯಲ್ಲಿ ಕೃಷಿ ಮಾರಾಟ ಇಲಾಖೆಯ ಉಪನಿರ್ದೇಶಕ ಓಂಕಾರಯ್ಯ, ಕೃಷಿ ಜಂಟಿ ನಿರ್ದೇಶಕ ಸೋಮಸುಂದರ್, ಸಹಕಾರ ಇಲಾಖೆಯ ಉಪನಿಬಂಧಕ ವೀರಭದ್ರಯ್ಯ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ನಿರೀಕ್ಷಕ ಮನೋಜ್ ಕುಮಾರ್, ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಾರಾಟ ಮಹಾ ಮಂಡಳಿ ನಿಯಮಿತದ ಜಿಲ್ಲಾ ವ್ಯವಸ್ಥಾಪಕ ಅಯ್ಯಪ್ಪ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿನಯ್ ಸೋಮಯ್ಯ ಆತ್ಮಹತ್ಯೆ ಶಾಸಕ ಪೊನ್ನಣ್ಣಗೆ ಕ್ಲೀನ್ ಚಿಟ್

**ಬೆಂಗಳೂರು,ಅ.1–** ಕೊಡಗು ಜಿಲ್ಲೆಯ ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸಿದ್ದ ಹೆಣ್ಣೂರು ಪೊಲೀಸರು, ನ್ಯಾಯಾಲಯಕ್ಕೆ ಬಿ ವರದಿ ಸಲ್ಲಿಸಿದ್ದಾರೆ.

ಕಾಂಗ್ರೆಸ್ ಶಾಸಕರಾದ ಎ.ಎಸ್.ಪೊನ್ನಣ್ಣ (ವಿರಾಜಪೇಟೆ ಕ್ಷೇತ್ರ), ಮಂಥರ್‌ಗೌಡ (ಮಡಿಕೇರಿ ಕ್ಷೇತ್ರ) ಹಾಗೂ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಕೊಡಗು ಜಿಲ್ಲಾ ಅಧ್ಯಕ್ಷ ತೆನ್ನೀರಾ ಮೈನಾ ಅವರು ವಿನಯ್ ಅವರಿಗೆ ಕಿರುಕುಳ ನೀಡಿ,

ಬೆದರಿಕೆ ಹಾಕಿದ್ದರು ಎಂಬುದಕ್ಕೆ ಯಾವುದೇ ಸಾಕ್ಷ್ಯಾಧಾರಗಳು ಸಿಕ್ಕಿಲ್ಲ ಎಂಬುದಾಗಿ ನ್ಯಾಯಾಲಯಕ್ಕೆ ಸಲ್ಲಿಸಿರುವ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಮೂವರಿಗೂ ತನಿಖಾಧಿಕಾರಿಗಳು ಕ್ಲೀನ್ ಚಿಟ್ ನೀಡಿದ್ದಾರೆ.

ಕಿರುಕುಳ ಹಾಗೂ ಬೆದರಿಕೆಯಿಂದ ವಿನಯ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುದಾಗಿ ವಿನಯ್ ಅವರ ಸಹೋದರ ಕೆ.ಎಸ್.ಜೀವನ್ ದೂರು ನೀಡಿದ್ದರು. ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲಾಗಿದೆ. ಯಾವುದೇ ಪುರಾವೆಗಳು ಸಿಕ್ಕಿಲ್ಲ. ದೂರಿನಲ್ಲಿ ಉಲ್ಲೇಖಿಸಿದ್ದ ವ್ಯಕ್ತಿಗಳ ಮೊಬೈಲ್ ಕರೆಗಳ ವಿವರ ಪಡೆಯಲಾಗಿತ್ತು.

ತಜ್ಞರ ಮೂಲಕವೂ ಕರೆಗಳ ವಿವರವನ್ನು ವಿಶ್ಲೇಷಣೆಗೆ ಒಳಪಡಿಸಲಾಗಿತ್ತು. ಆತ್ಮಹತ್ಯೆ ಮಾಡಿಕೊಂಡಿದ್ದ ವ್ಯಕ್ತಿಯ ಮೊಬೈಲ್ ಸಂಖ್ಯೆಗೆ ಯಾವುದೇ ಬೆದರಿಕೆ ಕರೆಗಳು ಹೋಗಿಲ್ಲ ಎಂಬುದು ತನಿಖೆಯಿಂದ ಗೊತ್ತಾಗಿದೆ ಎಂದು ಮೂಲಗಳು ತಿಳಿಸಿವೆ.

ಕೊಡಗಿನ ಸಮಸ್ಯೆಗಳು ಮತ್ತು ಪರಿಹಾರ ಹೆಸರಿನ ವಾಟ್ಸಾಪ್ ಗ್ರೂಪ್ ಅಡ್ಮಿನ್ ಆಗಿದ್ದರು. ಅದರಲ್ಲಿ ಪೋಸ್ಟ್ ಮಾಡಿದ್ದ ಸಂದೇಶವೊಂದರ ಸಂಬಂಧ ಅವರ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಸಂದೇಶ ಹಾಕಿದ್ದಕ್ಕೆ ಕೆಲವರ ಬೆದರಿಕೆ ಹಾಕಿದ್ದಾರೆ ಎಂದೂ ಆರೋಪಿಸಲಾಗಿತ್ತು.

ನಾಗವಾರದ ಕಂಪನಿಯ ಗೋದಾಮಿನ ಫ್ಯಾನ್‌ಗೆ ನೇಣು ಬಿಗಿದುಕೊಂಡು ಏಪ್ರಿಲ್ 4ರಂದು ಆತ್ಮಹತ್ಯೆ ಮಾಡಿಕೊಂಡಿದ್ದರು. ವಿನಯ್ ಆತ್ಮಹತ್ಯೆಗೂ ಮುನ್ನ ಬರೆದಿದ್ದ ಪತ್ರವೊಂದು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿತ್ತು. ತೆನ್ನೀರಾ ಮೈನಾ ಅವರ ವಿರುದ್ಧ ಹೆಣ್ಣೂರು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

ಪೊನ್ನಣ್ಣ, ಮಂಥರ್‌ಗೌಡ ಅವರ ಹೆಸರನ್ನೂ ಎಫ್‌ಐಆರ್‌ನಲ್ಲಿ ಸೇರಿಸುವ 'ಂತೆ ಬಿಜೆಪಿ ಮುಖಂಡರು ಪಟ್ಟು ಹಿಡಿದಿದ್ದರು. ವಿನಯ್ ಅವರ ಆತ್ಮಹತ್ಯೆ ಪ್ರಕರಣವು ಬಿಜೆಪಿ ಮತ್ತು ಕಾಂಗ್ರೆಸ್ ಮಧ್ಯೆ ಸಂಘರ್ಷದ ಕಿಡಿ ಹೊತ್ತಿಸಿತ್ತು. ಕೊಡಗಿನ ಕುಶಾಲನಗರದಲ್ಲೂ ದೊಡ್ಡಮಟ್ಟದ ಪ್ರತಿಭಟನೆ ನಡೆದಿತ್ತು.

## ಇಂದು ಸುಭೋದ್ ಯಾದವ್ ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು,ಅ.1–** ಭಾರತ್ ಸರ್ಕಾರದ ಜಲಶಕ್ತಿ ಸಚಿವಾಲಯ, ಜಲಸಂಪನ್ಮೂಲ ನದಿ ಅಭಿವೃದ್ಧಿ ಮತ್ತು ಗಂಗಾ ಪುನರುಜ್ಜೀವನ ಇಲಾಖೆಯ ಅಪರ ಕಾರ್ಯದರ್ಶಿಗಳಾದ ಸುಭೋದ್ ಯಾದವ್ ಅವರು ಅಕ್ಟೋಬರ್ 2 ಹಾಗೂ 3ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಕ್ಟೋಬರ್ 2ರ ಬೆಳಿಗ್ಗೆ 9.30 ಗಂಟೆಗೆ ಹೈದರಾಬಾದ್‌ನಿಂದ ನಿರ್ಗಮಿಸಿ ರಸ್ತೆ ಮಾರ್ಗವಾಗಿ ಮಧ್ಯಾಹ್ನ 1 ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸುವರು. ಮಧ್ಯಾಹ್ನ 2 ಗಂಟೆಗೆ ಸಿರವಾರ ಮತ್ತು ಮಸ್ಕಿಗೆ ತೆರಳಿ ಸಿರವಾರ ಮತ್ತು ಮಸ್ಕಿ ಬ್ಲಾಕ್‌ಗಳಲ್ಲಿ ಎಡಿಪಿ ಹಾಗೂ ಎಬಿಪಿಯ ಭೌತಿಕ ಪ್ರಗತಿಯ ವಿಮರ್ಶೆ ಮಾಡಲಿದ್ದಾರೆ.

ಅಕ್ಟೋಬರ್ 3ರ ಬೆಳಿಗ್ಗೆ 09ಕ್ಕೆ ಮಹತ್ವಾಕಾಂಕ್ಷೆಯ ಜಿಲ್ಲೆಯ ಬ್ಲಾಕ್ ಕಾರ್ಯಕ್ರಮದ ಅಡಿಯಲ್ಲಿ ಚಟುವಟಿಕೆಗಳಿಗೆ ಕ್ಷೇತ್ರಗಳಿಗೆ ಭೇಟಿ ನೀಡುವರು. ಮಧ್ಯಾಹ್ನ 1 ಗಂಟೆಗೆ ರಾಯಚೂರಿನಿಂದ ರಸ್ತೆ ಮೂಲಕ ಹೈದರಾಬಾದಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ವಿದೇಶಗಳಲ್ಲಿ ದೇಶಿ ಕರೆನ್ಸಿ ಬಳಕೆ ಪ್ರೋತ್ಸಾಹಕ್ಕೆ ಮುಂದಾದ ಆರ್‌ಬಿಐ

**ಮುಂಬೈ, ಅ. 1 (ಪಿಟಿಐ)–** ಗಡಿಯಾಚೆಗಿನ ವಸಾಹತುಗಳಿಗಾಗಿ ದೇಶೀಯ ಕರೆನ್ಸಿಯ ಬಳಕೆಯನ್ನು ಉತ್ತೇಜಿಸುವ ಪ್ರಯತ್ನದಲ್ಲಿ, ಭೂತಾನ್, ನೇಪಾಳ ಮತ್ತು ಶ್ರೀಲಂಕಾದ ಅನಿವಾಸಿಗಳಿಗೆ ದ್ವಿಪಕ್ಷೀಯ ವ್ಯಾಪಾರಕ್ಕಾಗಿ ಭಾರತೀಯ ರೂಪಾಯಿಗಳಲ್ಲಿ ಸಾಲ ನೀಡಲು ಬ್ಯಾಂಕುಗಳಿಗೆ ಅವಕಾಶ ನೀಡುವುದು ಸೇರಿದಂತೆ ಹಲವಾರು ಕ್ರಮಗಳನ್ನು ರಿಸರ್ವ್ ಬ್ಯಾಂಕ್ ಇಂದು ಪ್ರಕಟಿಸಿದೆ.

ಅಂತರರಾಷ್ಟ್ರಿಯ ವ್ಯಾಪಾರಕ್ಕಾಗಿ ಭಾರತೀಯ ರೂಪಾಯಿ ಬಳಕೆಯಲ್ಲಿ ಭಾರತ ಸ್ಥಿರ ಪ್ರಗತಿ ಸಾಧಿಸುತ್ತಿದೆ ಎಂದು ಗಮನಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೊ?ತ್ರಾ ಅವರು, ಅಧಿಕೃತ ಡೀಲರ್ ಬ್ಯಾಂಕ್‌ಗಳು ಗಡಿಯಾಚೆಗಿನ ವ್ಯಾಪಾರ ವಹಿವಾಟುಗಳಿಗಾಗಿ ಭೂತಾನ್, ನೇಪಾಳ ಮತ್ತು ಶ್ರಿ?ಲಂಕಾದ ಅನಿವಾಸಿಗಳಿಗೆ ಭಾರತೀಯ ರೂಪಾಯಿಗಳಲ್ಲಿ ಸಾಲ ನೀಡಲು ಅನುಮತಿ ನೀಡಲಾಗಿದೆ ಎಂದು ಹೇಳಿದರು.

ಇದಲ್ಲದೆ, ಐಎನ್‌ಆರ್ ಆಧಾರಿತ ವಹಿವಾಟುಗಳನ್ನು ಸುಗಮಗೊಳಿಸಲು ಭಾರತದ ಪ್ರಮುಖ ವ್ಯಾಪಾರ ಪಾಲುದಾರರ ಕರೆನ್ಸಿಗಳಿಗೆ ಪಾರದರ್ಶಕ ಉಲ್ಲೇಖ ದರಗಳನ್ನು ಸ್ಥಾಪಿಸಲು ಅವರು ಪ್ರಸ್ತಾಪಿಸಿದರು.ಕಾರ್ಪೊರೇಟ್ ಬಾಂಡ್‌ಗಳು ಮತ್ತು ವಾಣಿಜ್ಯ ಪತ್ರಿಕೆಗಳಲ್ಲಿ ಹೂಡಿಕೆ ಮಾಡಲು ಅರ್ಹರನ್ನಾಗಿ ಮಾಡುವ ಮೂಲಕ ವಿಶೇಷ ರೂಪಾಯಿ ವೋಸ್ಟ್ರೊ? ಖಾತೆ ಬ್ಯಾಲೆನ್‌ಗಳನ್ನು ವ್ಯಾಪಕವಾಗಿ ಬಳಸಲು ಅನುಮತಿಸಿದೆ.

ಎಸ್‌ಆರ್‌ವಿಎ ಎನ್ನುವುದು ಭಾರತೀಯ ಬ್ಯಾಂಕಿನೊಂದಿಗೆ ವಿದೇಶಿ ಬ್ಯಾಂಕ್‌ನಿಂದ ಭಾರತೀಯ ರೂಪಾಯಿಗಳಲ್ಲಿ ಅಂತರರಾಷ್ಟ್ರಿಯ ವ್ಯಾಪಾರ ವಸಾಹತುಗಳನ್ನು ಸುಗಮಗೊಳಿಸಲು ತೆರೆಯಲಾದ ಖಾತೆಯಾಗಿದೆ. ಈ ಕ್ರಮಗಳು ಯುಎಸ್ ಡಾಲರ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಮತ್ತು ಇದರಿಂದಾಗಿ ಆರ್ಥಿಕತೆಯನ್ನು ಹಠಾತ್ ವಿನಿಮಯ ದರದ ಏರಿಳಿತಗಳು ಮತ್ತು ಕರೆನ್ಸಿ ಬಿಕ್ಕಟ್ಟುಗಳಿಂದ ರಕ್ಷಿಸುತ್ತದೆ.

ಈ ಕ್ರಮಗಳು ಫಾರೆಕ್ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಮತ್ತು ಚಾಲ್ತಿ ಖಾತೆ ಕೊರತೆಯನ್ನು ಆರಾಮದಾಯಕ ಮಟ್ಟದಲ್ಲಿಡಲು ಸಹಾಯ ಮಾಡುತ್ತದೆ.ಭಾರತದ ಚಾಲ್ತಿ ಖಾತೆ ಕೊರತೆಯು 2025–26ರ ಮೊದಲ ತ್ರೈಮಾಸಿಕದಲ್ಲಿ 2.4 ಬಿಲಿಯನ್ ( ಯ ಶೇಕಡಾ 0.2) ಗೆ ಮಧ್ಯಮವಾಗಿದೆ, ಇದು 2024–25ರ ಮೊದಲ ತ್ರೈಮಾಸಿಕದಲ್ಲಿ ಹೆಚ್ಚಿದ ನಿವ್ವಳ ಸೇವೆಗಳ ಹೆಚ್ಚುವರಿ ಮತ್ತು ಹೆಚ್ಚಿನ ಸರಕುಗಳ ವ್ಯಾಪಾರ ಕೊರತೆಯ ಹೊರತಾಗಿಯೂ ಬಲವಾದ ರವಾನೆ ರಶೀದಿಗಳಿಂದಾಗಿ 2025–26ರ ಮೊದಲ ತ್ರೈಮಾಸಿಕದಲ್ಲಿ 8.6 ಬಿಲಿಯನ್ ( ಯ ಶೇಕಡಾ 0.9) ಕ್ಕೆ ಹೋಲಿಸಿದರೆ ಎಂದು ನಾಲ್ಕನೇ ಹಣಕಾಸು ನೀತಿ ವಿಮರ್ಶೆಯನ್ನು ಘೋಷಿಸುವಾಗ ಮಲ್ಹೊತ್ರಾ ಹೇಳಿದರು.ಜುಲೈ–ಆಗಸ್ಟ್ 2025 ರ ಅವಧಿಯಲ್ಲಿ, ಸರಕುಗಳ ವ್ಯಾಪಾರ ಕೊರತೆಯು ಹೆಚ್ಚುತ್ತಲೇ ಇತ್ತು.

ಜಾಗತಿಕ ವ್ಯಾಪಾರ ಅನಿಶ್ಚಿತತೆಗಳು ಹೆಚ್ಚುತ್ತಿದ್ದರೂ, ಸಾಫ್ಟ್‌ವೇರ್ ಮತ್ತು ವ್ಯಾಪಾರ ಸೇವೆಗಳಿಂದ ನಡೆಸಲ್ಪಡುವ ಭಾರತದ ಸೇವೆಗಳ ರಫ್ತುಗಳು ಜುಲೈ–ಆಗಸ್ಟ್ 2025 ರಲ್ಲಿ ಬಲವಾದ ಬೆಳವಣಿಗೆಯನ್ನು ಕಂಡವು ಎಂದು ಅವರು ಹೇಳಿದರು.ಇದಲ್ಲದೆ, ಬಲವಾದ ಸೇವಾ ರಫ್ತುಗಳು ಮತ್ತು ಬಲವಾದ ರವಾನೆ ರಶೀದಿಗಳು 2025–26ರ ಅವಧಿಯಲ್ಲಿ ಚಾಲ್ತಿ ಖಾತೆ ಕೊರತೆಯನ್ನು ಸುಸ್ಥಿರವಾಗಿಡುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.ಸೆಪ್ಟೆಂಬರ್ 26, 2025 ರ ಹೊತ್ತಿಗೆ, ಭಾರತದ ವಿದೇಶಿ ವಿನಿಮಯ ಮೀಸಲು 700.2 ಶತಕೋಟಿ ಆಗಿದ್ದು, 11 ತಿಂಗಳಿಗಿಂತ ಹೆಚ್ಚಿನ ಸರಕುಗಳ ಆಮದುಗಳನ್ನು ಪೂರೈಸಲು ಸಾಕಾಗುತ್ತದೆ.ಒಟ್ಟಾರೆಯಾಗಿ, ಭಾರತದ ಬಾಹ್ಯ ವಲಯವು ಸ್ಥಿತಿಸ್ಥಾಪಕತ್ವವನ್ನು ಮುಂದುವರೆಸಿದೆ ಮತ್ತು ಬಾಹ್ಯ ಬಾಧ್ಯತೆಗಳನ್ನು ಆರಾಮವಾಗಿ ಪೂರೈಸುವ ವಿಶ್ವಾಸವನ್ನು ಹೊಂದಿದೆ ಎಂದು ಅವರು ಹೇಳಿದರು.

ದೇಶೀಯ ಸ್ಥೂಲ ಆರ್ಥಿಕ ಮೂಲಭೂತ ಅಂಶಗಳ ಹೊರತಾಗಿಯೂ, ಕೆಲವು ಕುಸಿತವನ್ನು ಕಂಡಿದೆ ಮತ್ತು ಚಂಚಲತೆಯ ಹಂತಗಳನ್ನು ಕಂಡಿದೆ. ನ ಚಲನೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ಖಾತರಿಪಡಿಸಿದಂತೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಅವರು ಹೇಳಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H